ಸಂಪುಟ 01 | ಸಂಚಿಕೆ 75 | ಮಂಗಳವಾರ 27 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ರಾಷ್ಟ್ರೀಯ ಭೌಗೋಳಿಕ ದಿನ

ಪ್ರತಿ ವರ್ಷ ಜನವರಿ 27 ರಂದು ದೇಶಾದ್ಯಂತ ರಾಷ್ಟ್ರೀಯ ಭೌಗೋಳಿಕ ದಿನವನ್ನು ಆಚರಿಸಲಾಗುತ್ತದೆ. ಒಂದು ಶತಮಾನಕ್ಕೂ ಹೆಚ್ಚು ಕಾಲ ನಿರಂತರವಾಗಿ ಪ್ರಕಟವಾಗುತ್ತಿರುವ "ನ್ಯಾಷನಲ್ ಜಿಯಾಗ್ರಫಿಕ್ ಮ್ಯಾಗಜೀನ್" ಅನ್ನು ಗೌರವಿಸಲು ಈ ದಿನವನ್ನು ಮೀಸಲಿಡಲಾಗಿದೆ.

## ಸುಭಾಷಿತ


ನಮ್ಮ ಉತ್ಸಾಹ ಹುಲ್ಲಿನ ಬೆಂಕಿಯಾಗಬಾರದು,
ಕಲ್ಲಿದ್ದಲ ಕಾವಾಗಬೇಕು.

ಕುವೆಂಪು



ನೈಜ್ಯ ದೆಸೆ ನ್ಯೂಸ್

ಶ್ರೀಮರಿ ಬಸವಲಿಂಗೇಶ್ವರ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 77 ಗಣರಾಜ್ಯೋತ್ಸವ ಆಚರಣೆ ಮಾಡಲಾಯಿತು ಶಾಲೆಯ ಕಾರ್ಯಧ್ಯಕ್ಷರಾದ ಶ್ರೀ ಶ್ರೀ ಸಿದ್ದ ಬಸವ ಮಹಾಸ್ವಾಮಿಗಳು ಧ್ವಜಾರೋಹಣವನ್ನು ಕಾರ್ಯಕ್ರಮವನ್ನು ನೆರವೇರಿಸಿದರು ಹಾಗೂ ಶಾಲಾ ಆಡಳಿತ ಮಂಡಳಿಯರು ಮುಖ್ಯ ಗುರುಗಳು ಶಾಲಾ ಸಿಬ್ಬಂದಿಯವರು ಉಪಸ್ಥಿತರಿದ್ದರು



ನೈಜ್ಯ ದೆಸೆ ನ್ಯೂಸ್

ಮಸ್ಕಿ ಕಾಂಗ್ರೆಸ್ ಕಛೇರಿಯಲ್ಲಿ ನಡೆದ 77ನೇ ಗಣರಾಜ್ಯೋತ್ಸವದ ಅಂಗವಾಗಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರು ಶ್ರೀ ಮಲ್ಲಿಕಾರ್ಜುನ ಪಾಟೀಲ್ ಯದ್ದಲದಿನ್ನಿ ರವರು ಧ್ವಜಾರೋಹಣ ನೆರವೇರಿಸಿದರು.ಈ ಸಂದರ್ಭದಲ್ಲಿ ಮಸ್ಕಿ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಶ್ರೀ ಆರ್.ಬಸನಗೌಡ ತುರ್ವಿಹಾಳ ಹಾಗೂ ಕಾಂಗ್ರೆಸ್ ಮುಖಂಡರು, ಚುನಾಯಿತ ಪ್ರತಿನಿಧಿಗಳು, ಪಕ್ಷದ ಪದಾಧಿಕಾರಿಗಳು ಇನ್ನಿತರ ಉಪಸ್ಥಿತಿ ಇದ್ದರು.

# 77ನೇ ಗಣರಾಜ್ಯೋತ್ಸವ ಸಂಭ್ರಮ :ರಾಜ್ಯ ಸರ್ಕಾರ ಸಿದ್ದಪಡಿಸಿಕೊಟ್ಟ ಭಾಷಣ ಯಥಾವತ್ ಓದಿದ ರಾಜ್ಯಪಾಲ ಗೆಹ್ಲೋಟ್..!

ಬೆಂಗಳೂರು: ರಾಜ್ಯದಲ್ಲಿ 77ನೇ ಗಣರಾಜ್ಯೋತ್ಸವದ ಸಂಭ್ರಮ ಜೋರಾಗಿದ್ದು, ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಧ್ವಜಾರೋಹಣ ನೆರವೇರಿಸಿದ್ದಾರೆ. ಈ ವೇಳೆ ರಾಜ್ಯದ ಜನತೆಯನ್ನುದ್ದೇಶಿಸಿ ಮಾತನಾಡಿರುವ ರಾಜ್ಯಪಾಲರು, ರಾಜ್ಯ ಸರ್ಕಾರ ಸಿದ್ದಪಡಿಸಿಕೊಟ್ಟ ಭಾಷಣವನ್ನು ಓದಿದ್ದಾರೆ. ಈ ಮೂಲಕ ಸರ್ಕಾರ ಹಾಗೂ ರಾಜ್ಯಪಾಲರ ಎಂಬ ಊಹಾಪೋಹಗಳಿಗೆ ತೆರೆ ಎಳೆದಿದ್ದಾರೆ.

ಜನತೆಯನ್ನುದ್ದೇಶಿಸಿ ಮಾತನಾಡಿದ ರಾಜ್ಯಪಾಲರು, 77ನೇ ಗಣರಾಜ್ಯೋತ್ಸವದ ಈ ವಿಶೇಷ ಸಂದರ್ಭದಲ್ಲಿ ಕರ್ನಾಟಕದ ಜನತೆಗೆ ನನ್ನ ಹೃತ್ಪೂರ್ವಕ ಶುಭಾಶಯಗಳನ್ನು ಕೋರುತ್ತೇನೆ. ಜನವರಿ 26ನೇ ತಾರೀಖು ಭಾರತದ ಚರಿತ್ರೆಯಲ್ಲಿ ಒಂದು ಅತ್ಯಂತ ನಿರ್ಣಾಯಕ ದಿನ. ಇದು ಸಾವಿರಾರು ವರ್ಷಗಳಿಂದ ರೂಪುಗೊಂಡಿದ್ದ ರಾಜಪ್ರಭುತ್ವ ಹಾಗೂ 17ನೇ ಶತಮಾನದಿಂದ ಅಸ್ತಿತ್ವಕ್ಕೆ ಬಂದಿದ್ದ ವಸಾಹತುಶಾಹಿ ಆಡಳಿತವನ್ನು ಕೊನೆಗೊಳಿಸಿ ಜನಪ್ರಭುತ್ವವನ್ನು ಪ್ರತಿಷ್ಠಾಪಿಸಿಕೊಂಡ ದಿನ.

ತಾರತಮ್ಯವನ್ನು ಆಧರಿಸಿದ್ದ ವಸಾಹತುಶಾಹಿಯನ್ನು ಹಾಗೂ ಪುರಾತನ ಕಾನೂನುಗಳನ್ನು ಕಿತ್ತೆಸೆದು ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯದ ವಿಚಾರದಲ್ಲಿ ಎಲ್ಲರೂ ಸಮಾನರು ಎನ್ನುವ ನವ ಭಾರತದ ಪರಿಕಲ್ಪನೆಯ



ಸಂವಿಧಾನವನ್ನು ಜಾರಿಗೊಳಿಸಿದ ದಿನ. ಗಣತಂತ್ರ ವ್ಯವಸ್ಥೆಯನ್ನು ರೂಪುಗೊಳಿಸಿಕೊಳ್ಳುವುದಕ್ಕಾಗಿ ಅಸಂಖ್ಯಾತ ಜನರು ತ್ಯಾಗ-ಬಲಿದಾನಗಳನ್ನು ಮಾಡಿದ್ದಾರೆ. ಅವರೆಲ್ಲರನ್ನೂ ಈ ಅಮೃತ ಗಳಿಗೆಯಲ್ಲಿ ಗೌರವಪೂರ್ವಕವಾಗಿ ಸ್ಮರಿಸೋಣ ಎಂದು ಹೇಳಿದರು. ನಮ್ಮ ಸ್ವಾತಂತ್ರ್ಯ ಹೋರಾಟಗಾರರು ಶತಶತಮಾನಗಳ ಕಾಲ ಹೋರಾಟ ಮಾಡಿ ನ್ಯಾಯ ಹಾಗೂ ಸ್ವಾತಂತ್ರ್ಯವನ್ನು ದಕ್ಕಿಸಿಕೊಟ್ಟಿದ್ದಾರೆ. ನಾವೆಲ್ಲರೂ ನಮ್ಮ ಹಿರಿಯರ ಶ್ರಮ ವ್ಯರ್ಥವಾಗದಂತೆ ಕಾಪಾಡಿಕೊಳ್ಳುವ ಪ್ರತಿಜ್ಞೆ ಮಾಡೋಣ.

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸ್ವಾತಂತ್ರ್ಯವನ್ನು, ರಾಜಕೀಯ, ಆರ್ಥಿಕ ಮತ್ತು ಸಾಮಾಜಿಕ ಸ್ವಾತಂತ್ರ್ಯವೆಂದು ಮೂರು ಮಾದರಿಗಳಲ್ಲಿ ವ್ಯಾಖ್ಯಾನಿಸಿದ್ದಾರೆ. "ನಾವು ಯಾವುದೇ ಕಾರಣಕ್ಕೂ ರಾಜಕೀಯ ಪ್ರಜಾಪ್ರಭುತ್ವದಿಂದ ಸಂತುಷ್ಟಗೊಳ್ಳಬಾರದು. ನಾವು ನಮ್ಮ ರಾಜಕೀಯ ಪ್ರಜಾಪ್ರಭುತ್ವವನ್ನು ಸಾಮಾಜಿಕ ಪ್ರಜಾಪ್ರಭುತ್ವವಾಗಿಸಬೇಕು. ಸಾಮಾಜಿಕ ಪ್ರಜಾಪ್ರಭುತ್ವ ಎಂದರೆ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವವನ್ನು ಬದುಕಿನ ಸಿದ್ಧಾಂತವಾಗಿ ಗುರುತಿಸಿಕೊಂಡ ಒಂದು ಜೀವನ ಕ್ರಮವಾಗಿದೆ. ಸ್ವಾತಂತ್ರ್ಯ ಸಮಾನತೆ ಮತ್ತು ಭ್ರಾತೃತ್ವದ ನಿಯಮಗಳನ್ನು ಪ್ರತ್ಯೇಕ ಅಂಶಗಳಾಗಿ ಪರಿಗಣಿಸಬಾರದು.

ಇವುಗಳಲ್ಲಿ ಒಂದರಿಂದ ಇನ್ನೊಂದನ್ನು ಪ್ರತ್ಯೇಕಿಸಿದರೆ ಅದು ಪ್ರಜಾಪ್ರಭುತ್ವದ ಸೋಲಿಗೆ ಕಾರಣವಾಗುತ್ತದೆ. ಸ್ವಾತಂತ್ರ್ಯವು ಸಮಾನತೆಯಿಂದ ಪ್ರತ್ಯೇಕವಾಗುವುದಿಲ್ಲ, ಸಮಾನತೆಯು ಸ್ವಾತಂತ್ರ್ಯದಿಂದ ಪ್ರತ್ಯೇಕವಾಗುವುದಿಲ್ಲ ಅಥವಾ ಸ್ವಾತಂತ್ರ್ಯ ಮತ್ತು ಸಮಾನತೆಯು ಭ್ರಾತೃತ್ವದಿಂದ ಪ್ರತ್ಯೇಕವಾಗುವುದಿಲ್ಲ. ಸಮಾನತೆಯಿಲ್ಲದ ಸ್ವಾತಂತ್ರ್ಯವು ಹಲವರ ಮೇಲೆ ಕೆಲವರ ಸರ್ವಾಧಿಕಾರವಾಗಿ ಮೆರೆಯುತ್ತದೆ. ಸ್ವಾತಂತ್ರ್ಯವಿಲ್ಲದ ಸಮಾನತೆಯು ವ್ಯಕ್ತಿಗತ ಕ್ರಿಯಾಶೀಲತೆಯನ್ನು ಅಂತ್ಯಗೊಳಿಸುತ್ತದೆ. ಭ್ರಾತೃತ್ವವಿಲ್ಲದಿದ್ದರೆ, ಸ್ವಾತಂತ್ರ್ಯ ಹಾಗೂ ಸಮಾನತೆಗಳು ಯಾವುದೇ ವಿಷಯದ ಸಹಜ ನಡೆಯಾಗುವುದಿಲ್ಲ ಎಂದಿದ್ದಾರೆ. ಕರ್ನಾಟಕ ಸರ್ಕಾರವು ಸಂವಿಧಾನವು ಪ್ರಸ್ತಾಪಿಸಿರುವ ಈ ಮೂರೂ ವಿಷಯಗಳನ್ನು ಆದ್ಯತೆಯ ವಿಷಯಗಳನ್ನಾಗಿ ಪರಿಗಣಿಸಿದೆ. ರಾಜ್ಯದ ಪ್ರತಿ ಪ್ರದೇಶ ಹಾಗೂ ಪ್ರತಿ ಸಮುದಾಯಗಳ ಜನರ ಧ್ವನಿಗಳನ್ನು ಆಲಿಸಿ, ಅವುಗಳಿಗೆ ನ್ಯಾಯೋಚಿತ ಪರಿಹಾರ ನೀಡುವ ಕೆಲಸವನ್ನು ಮಾಡುತ್ತಿದೆ.

# 77ನೇ ಗಣರಾಜ್ಯೋತ್ಸವ ಸಡಗರ: ಮಹನೀಯರ ಸ್ಮರಣೆಯೊಂದಿಗೆ ಧ್ವಜಾರೋಹಣ




ನೈಜ್ಯ ದೆಸೆ ನ್ಯೂಸ್

ಮಾನ್ವಿ: ಪಟ್ಟಣದ ಪುರಸಭೆ ಕಚೇರಿಗಳಲ್ಲಿ 77ನೇ ಗಣರಾಜ್ಯೋತ್ಸವವನ್ನು ಅತ್ಯಂತ ಶ್ರದ್ಧೆ ಮತ್ತು ದೇಶಭಕ್ತಿಯಿಂದ ಆಚರಿಸಲಾಯಿತು. ಸಂವಿಧಾನ ಶಿಲ್ಪಿ ಹಾಗೂ ರಾಷ್ಟ್ರಪಿತನ ಸ್ಮರಣೆಯೊಂದಿಗೆ ಕಾರ್ಯಕ್ರಮಗಳು ಅರ್ಥಪೂರ್ಣವಾಗಿ ಜರುಗಿದವು.

ಪುರಸಭೆ ಕಚೇರಿ ಆವರಣದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಭಾರತ ಸಂವಿಧಾನದ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ, ವಿಶೇಷ ಪೂಜೆ ನೆರವೇರಿಸಲಾಯಿತು. ಬಳಿಕ ಪುರಸಭೆಯ ಮುಖ್ಯಾಧಿಕಾರಿ ಪರಶುರಾಮ್ ದೇವಾಮನೆ ರಾಷ್ಟ್ರಧ್ವಜವನ್ನು ಹಾರಿಸಿ, ಗೌರವ ವಂದನೆ ಸಲ್ಲಿಸಿ. 77ನೇ ಗಣರಾಜ್ಯೋತ್ಸವ ಶುಭಾಶಯಯನ್ನು ತಿಳಿಸಿದರು ನಂತರ ಮಾತಾಡಿದ ಗಣ್ಯರು.

ಸಂವಿಧಾನ ನಮಗೆ ನೀಡಿರುವ ಹಕ್ಕು ಮತ್ತು ಕರ್ತವ್ಯಗಳನ್ನು ಸಮಾನವಾಗಿ ಪಾಲಿಸಿದಾಗ ಮಾತ್ರ ಗಣರಾಜ್ಯೋತ್ಸವಕ್ಕೆ ಅರ್ಥ ಎಂದರು. ನಗರ ಯೋಜನೆ ಪ್ರಾಧಿಕಾರದ ಅಧ್ಯಕ್ಷರಾದ ಅಬ್ದುಲ್ ಗಫರ್ ಸಾಬ್, ಮುಖಂಡರಾದ ಸೈಯದ್ ಖಾಲಿದ್ ಖಾದ್ರಿ, ಮಾಜಿ ಪುರಸಭೆ ಅಧ್ಯಕ್ಷ ಎಂ ಡಿ ಇಸ್ಮಾಯಿಲ್, ಪುರಸಭೆ ಸದಸ್ಯರಾದ ಅಮ್ಜದ್ ಖಾನ್, ಸಬ್ಜಲಿ ಶಾಖಾ, ಜಿಲಾನಿ ಖುರೇಶಿ, ನಾಮನಿರ್ದೇಶಿತ ಸದಸ್ಯರಾದ ಕಾಮೇಶ, ಹಂಪಯ್ಯ ನಾಯಕ ಸೇರಿದಂತೆ ಪುರಸಭೆ ಸದಸ್ಯರು, ಸಿಬ್ಬಂದಿಗಳು, ಪೌರಕಾರ್ಮಿಕರು ಮತ್ತು ಸ್ಥಳೀಯರು ಇದ್ದರು.

# ಜಿಲ್ಲಾಡಳಿತ ಭವನದಲ್ಲಿ ಗಣರಾಜ್ಯೋತ್ಸವ ದಿನಾಚರಣೆ; ರಾಷ್ಟ್ರ ಧ್ವಜಾರೋಹಣ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಇಲ್ಲಿನ ನೂತನ ಜಿಲ್ಲಾಡಳಿತ ಭವನದಲ್ಲಿ ಜನವರಿ 26ರಂದು ಗಣರಾಜ್ಯೋತ್ಸವ ದಿನಾಚರಣೆಯ ಕಾರ್ಯಕ್ರಮ ನಡೆಯಿತು. ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು.



ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಣ್ಣ ಸಜ್ಜನ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರಾದ ನಸೀರ್ ಅಹ್ಮದ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೆ.ಡಿ.ಬಡಿಗೇರ, ಜಿಲ್ಲಾ ಖಜಾನೆ ಅಧಿಕಾರಿ ಸಿದ್ದಾರಾಮೇಶ್ವ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ಮನೋಹರ ಕೃಷ್ಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದ್ದೀಶ್, ಶಿರಸ್ತೇದಾರ ಸೂಗುರೇಶ ದೇಸಾಯಿ, ಸಿಬ್ಬಂದಿ ಮಲ್ಲೇಶ, ವೇಣುಮಾಧವ್, ಪ್ರಕಾಶ್, ಅನೀಲ್ ಕುಲಕರ್ಣಿ ಸೇರಿದಂತೆ ಇತರರು ಇದ್ದರು.

# ಮಾಜಿ ಯೋಧರಿಂದ 77ನೆ ಗಣರಾಜ್ಯೋತ್ಸವ ಆಚರಣೆ

ನೈಜ್ಯ ದೆಸೆ ನ್ಯೂಸ್

ಮಾನ್ವಿ: ನೀರಾವರಿ ಇಲಾಖೆಯ ಆವರಣದಲ್ಲಿ ಹುತಾತ್ಮ ಯೋಧ ಮಂಜುನಾಥ್ ಸಾದಪುರ್ ಇವರ ಪುತ್ಥಳಿ ಹತ್ತಿರ 77 ನೆ ಗಣರಾಜ್ಯೋತ್ಸವ ಆಚರಣೆ ಹುತಾತ್ಮ ಯೋಧ ಮಂಜುನಾಥ್ ಅಂಗಡಿ ಸಾದಾಪೂರ್ ತಾಯಿ ಪಾರ್ವತಮ್ಮ ಮಲ್ಲಿಕಾರ್ಜುನ ಅಂಗಡಿ ಅಧ್ಯಕ್ಷತೆಯಲ್ಲಿ ಆಚರಿಸಲಾಯಿತು ಇ ಸಂದರ್ಭದಲ್ಲಿ ಮಾತನಾಡಿದ ಬಸವರಾಜ ನಾಯಕ ಮುಸ್ಟೂರ ಸಂವಿಧಾನ ಶಿಲ್ಪಿ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಸಂವಿಧಾನ ರಚಿಸಿದೆ ಇದ್ದರೆ.

ನಮಗೆ ದೇಶ ಸೇವೆ ಮಾಡುವುದಕ್ಕೆ ಆಗುತ್ತಿರಲಿಲ್ಲ ಸರ್ವ ಜನಾಂಗದವರಿಗೆ ಸಂವಿಧಾನದಲ್ಲಿ



ಮೀಸಲಾತಿ ಇದೆ ಎಲ್ಲರಿಗೂ ಹಕ್ಕುಗಳಿವೆ ಎಂದರು ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಕೃಷ್ಣಮೂರ್ತಿ ಕಲ್ಲೂರ್ ಹನುಮಂತ ನಸ್ಲಾಪುರ್ ತಿಮ್ಮಪ್ಪ ಗುಜ್ಜಲ ಹರವಿ ತಿಪ್ಪಣ್ಣನಾಯಕ ಹರವಿ ಜೆಲ್ಲಿ ಆಂಜನೇಯ ನೀರಮಾನ್ವಿ ಕೆ ಶರಣಬಸವ ನಾಯಕ ನೀರಮಾನ್ವಿ ಹಾಗೂ ಬಸವ ಅಂಗಡಿ ಸಾದಾಪೂರ್ ವಿನೋದ್ ಮಾನ್ವಿ ಸಾದಾಪುರ ಗ್ರಾಮದ ಯುವಕರು ವಿದ್ಯಾರ್ಥಿಗಳು ಹಾಜರಿದು ಕಾರ್ಯಕ್ರಮ ಯಶಸ್ವಿಗೊಳಿಸಿದರು.

# ಪತ್ರಿಕಾಗೋಷ್ಠಿಯಲ್ಲಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹೇಳಿಕೆ ರಾಯಚೂರು ಜಿಲ್ಲೆಯಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿ ಫಲಿತಾಂಶ ಸುಧಾರಣೆಗೆ ಒತ್ತು

ನೈಜ್ಯ ದೆಸೆ ನ್ಯೂಸ್

ರಾಯಚೂರು: ರಾಯಚೂರು ಜಿಲ್ಲೆಯಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಫಲಿತಾಂಶ ಸುಧಾರಿಸುವ ಪ್ರಯತ್ನದ ಭಾಗವಾಗಿ ಕರ?ಯಕ್ರಮ ರೂಪಿಸಲು ಎನ್ ಜಿಓ ಜೊತೆಗೆ ರ?ಚಿಸಿ ಕರ?ಯಯೋಜನೆ ರೂಪಿಸುವ ಚಿಂತನೆಯಿದೆ ಎಂದು ರ?ನಾಟಕ ರ?ಕಾರದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಹೇಳಿದರು.

ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 26ರಂದು ಜಿಲ್ಲಾಡಳಿತದಿಂದ ನಡೆದ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಬಳಿಕ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಕೇರಳ ಮತ್ತು ರ?ನಾಟಕ ಹೊರತುಪಡಿಸಿ ದೇಶದ ಎಲ್ಲ ರಾಜ್ಯಗಳಿಗೂ ಏಮ್ಸ್ ನೀಡಲಾಗಿದೆ.



ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕೇಂದ್ರಕ್ಕೆ ಪತ್ರ ಬರೆದು ರ?ನಾಟಕದ ರಾಯಚೂರಲ್ಲಿ ಏಮ್ಸ್ ಸ್ಥಾಪನೆಗೆ ಒತ್ತಡ ಹಾಕುತ್ತಿದ್ದಾರೆ ಎಂದು ಸಚಿವರು ತಿಳಿಸಿದರು. ರಾಯಚೂರು ಜಿಲ್ಲೆಯಲ್ಲಿ ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ ಎಂಬ ವರದಿಗಳಿವೆ. ಇದನ್ನು ಹೋಗಲಾಡಿಸಲು ಆರೋಗ್ಯ ಇಲಾಖೆಯಿಂದ ಈಗಾಗಲೇ ಅಗತ್ಯ ಕ್ರಮವಹಿಸಲಾಗಿದೆ. ಈ ದಿಶೆಯಲ್ಲಿ ಜಿಲ್ಲೆಯ ಜನರ ಒತ್ತಾಸೆಯಂತೆ ಜಿಲ್ಲೆಯಲ್ಲಿ ಮಕ್ಕಳ ಆಸ್ಪತ್ರೆಯ ಸ್ಥಾಪನೆಯ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ರ?ಚಿಸುವುದಾಗಿ ಸಚಿವರು ತಿಳಿಸಿದರು. ರಸ್ತೆ, ಬೀದಿ ದೀಪ ಸೇರಿದಂತೆ ಮೂಲಭೂತ ಸೌರ?ಯ ಕಲ್ಪಿಸಲು ರಾಯಚೂರು ಜಿಲ್ಲೆಗೆ 200 ಕೋಟಿ ರೂ ಬಿಡುಗಡೆಯಾಗಿದೆ.

ರಸ್ತೆ ದುರಸ್ತಿ ಸೇರಿದಂತೆ ಮೂಲಭೂತ ಸೌರ?ಯ ಕಲ್ಪಿಸುವ ಕರ?ಯಗಳು ನಿರಂತರ ನಡೆಯಲಿವೆ ಎಂದು ಸಚಿವರು ತಿಳಿಸಿದರು. ಪತ್ರರ?ತರ ಅಪೇಕ್ಷೆಯಂತೆ ಸಹ ಫೆ.5ರಿಂದ ಮೂರು ದಿನಗಳ ಕಾಲ ರಾಯಚೂರು ಜಿಲ್ಲಾ ಉತ್ಸವ ನಿಗದಿ ಮಾಡಲಾಗಿದೆ. ಇದಕ್ಕೆ ವ್ಯಾಪಕ ಪ್ರಚಾರ ನೀಡಬೇಕು ಎಂದು ಸಚಿವರು ಮಾಧ್ಯಮ ಪ್ರತಿನಿಧಿಗಳಲ್ಲಿ ಮನವಿ ಮಾಡಿದರು. ರಾಯಚೂರು ಉತ್ಸವಕ್ಕು ಮೊದಲು ರಾಯಚೂರು ನಗರದಲ್ಲಿನ ಎಲ್ಲ ರಸ್ತೆಗಳಲ್ಲಿನ ತಗ್ಗು ಗುಂಡಿ ಮುಚ್ಚಿ ಸರಿಪಡಿಸಬೇಕು ಎಂದು ಮಹಾನಗರ ಪಾಲಿಕೆಗೆ ಸೂಚನೆ ನೀಡಿದ್ದಾಗಿ ಸಚಿವರು ಹೇಳಿದರು. ರಾಯಚೂರು ಜಿಲ್ಲೆಯಲ್ಲಿ ಅನುವಿದ್ಯುತ್ ಸ್ಥಾವರ ಘಟಕದ ಸ್ಥಾಪನೆಗೆ ಅವಕಾಶ ಮಾಡಿಕೊಡುವುದಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

ನರ?ದಾಕ್ಷಿಣ್ಯ ಕ್ರಮ ವಹಿಸಿ ಅಕ್ರಮ ಮರಳು ಸಾಗಣೆ, ಇಸ್ಪಿಟ್, ಜೂಜು ದಂಧೆಗಳನ್ನು ನಿಗ್ರಹಿಸಲು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಪರ?ಣ ಸ್ವಾತಂತ್ರ?ಯ ನೀಡಲಾಗಿದೆ ಎಂದು ಸಚಿವರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಶಾಸಕರಾದ ಬಸನಗೌಡ ದದ್ದಲ್, ಎ ವಸಂತಕುಮಾರ, ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕರ?ಜುನ ಗೌಡ, ಉಪಾಧ್ಯಕ್ಷರಾದ ಬಸೀರ್ ಅಹ್ಮದ್, ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷರಾದ ಪವನ ಕಿಶೋರ ಪಾಟೀಲ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಪಂ ಸಿಇಓ ಈಶ್ವರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಝೋನಲ್ ಆಯುಕ್ತರಾದ ಪುರುರಾಜ ಸಿಂಗ್, ರಾಜ್ಯ ನೀತಿ ಆಯೋಗದ ಸದಸ್ಯರಾದ ಡಾ.ರಝಾಕ್ ಉಸ್ತಾದ್ ಇದ್ದರು.

## ಸಾಹಿತ್ಯ ಸಿಂಚನ

"ನಾನು ಭಾರತೀಯ"

ಗಣತಂತ್ರದ ದಿನವಿಂದು ನಮಗೆ.!
ಸರ್ವ ಸ್ವತಂತ್ರ ಭಾರತ ದೇಶವಂದು..
ಗಣತಂತ್ರ ರಾಷ್ಟ್ರವಾದ ಅಮೃತಘಳಿಗೆ
ಮಹಾ ಸಂವಿಧಾನ ಬಂದಿತ್ತು ಜಾರಿಗೆ.!

ರಾಜ್ಯ ರಾಜ್ಯ ಗಡಿಗಳನೆಲ್ಲ ತೊರೆದು
ವೇಷ ಭಾಷೆ ಭೇದಗಳನೆಲ್ಲ ಮರೆತು
ರಾಷ್ಟ್ರಧ್ವಜದ ಎದುರು ಹೆಮ್ಮೆಯಲಿ
ಭಾರತೀಯರೆಲ್ಲ ಒಂದಾದ ಹೊತ್ತು.!

ಈ ನೆಲದಿ ವಿವಿಧತೆಗಳಲ್ಲೂ ಏಕತೆ
ಗಾಳಿ ಗಂಧ ಬೆಸೆದ ಹಾಗೆ ಐಕ್ಯತೆ.!
ಸಮಸ್ತ ಹೃದಯಗಳಲ್ಲು ಭಾವೈಕ್ಯತೆ
ಇದು ಭವ್ಯ ಭಾರತದ ಯಶೋಗಾತೆ.!

ಭಾರತೀಯತೆಯೇ ನಮ್ಮ ಧರ್ಮ.!
ಭರತಖಂಡವೇ ನಮ್ಮ ಗುಡಿಯು.!
ತ್ರಿವರ್ಣ ಧ್ವಜವೇ ನಮ್ಮ ದೇವರು.!
ಭಾರತೀಯರೆಲ್ಲ ಅಣ್ಣತಮ್ಮಂದಿರು.!

ದಿಗ್ದಿಗಂತಗಳ ದಾಟಿ ಹಾರುತಿರಲಿ
ಹೆಮ್ಮೆಯಲಿ ನಮ್ಮ ರಾಷ್ಟ್ರಬಾವುಟ.!
ಮೊಳಗುತಿರಲಿ ನಮ್ಮ ರಾಷ್ಟ್ರಗೀತೆ.!
ಪಸರಿಸುತಿರಲಿ ನಮ್ಮ ರಾಷ್ಟ್ರಕೀರ್ತಿ.!

ಗರ್ವದಿ ಎದೆಯ ತಟ್ಟಿ ಹೇಳುವೆ..
"ಹೌದು ನಾನು ಭಾರತೀಯ.."
ಈ ಮಣ್ಣಿನ ಕಣಕಣವು ಪೂಜನೀಯ.!
ಮತ್ತೆ ಮತ್ತೆ ಇಲ್ಲೆ ಹುಟ್ಟುವ ಆಶಯ.!!

ಎ.ಎನ್.ರಮೇಶ್. ಗುಬ್ಬಿ.

# ಸಂಭ್ರಮದಿಂದ 77ನೇ ಗಣರಾಜ್ಯೋತ್ಸವ ಆಚರಣೆ

ನೈಜ್ಯ ದೆಸೆ ನ್ಯೂಸ್

**ಕವಿತಾಳ: ಪಟ್ಟದ ವಿವಿಧ ಸರ್ಕಾರಿ ಶಾಲಾ,ಕಾಲೇಜು, ಪೊಲೀಸ್ ಠಾಣೆ, ಆಸ್ಪತ್ರೆ,ಸಹಕಾರಿ ಸಂಘಗಳು ಸೇರಿದಮತೆ ಇನ್ನಿತರ ಖಾಸಗಿ ಶಾಲಾ ಸಂಸ್ಥೆಗಳಲ್ಲಿ ಸಂಭ್ರಮದಿಂದ 77ನೇ ಗಣ–ರಾಜ್ಯೋತ್ಸವವನ್ನು ಆಚರಣೆ ಮಾಡಲಾಯಿತು.**

ಪೊಲೀಸ್ ಠಾಣೆಯಲ್ಲಿ ಪಿಎಸ್ಐ ಗುರುಚಂದ್ರ ಯಾದವ್ ಮಹಾತ್ಮ ಗಾಂದೀಜಿ, ಡಾ.ಅಂಬೇಡ್ಕರ್ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣವರ ಭಾವಚಿತ್ರ ನಮನ ಸಲ್ಲಿಸಿ ದ್ವಜಾರೋಹಣವನ್ನು ನೆರವೇರಿಸಿದರು. ನಂತರ ಮಾತನಾಡಿದ ಅವರು 'ನಮ್ಮ ದೇಶಕ್ಕೆ ಸ್ವತಂತ್ರವು ಮಹನೀಯರ ಬಲಿದಾನದ ಫಲವಾಗಿ ದೊರಕಿದ್ದು ನಾವುಗಳು ಭಾವೈಕ್ಯತೆಯಿಂದ ಜೀವನ ನಡೆಸುವ ಮೂಲಕ ಅವರ ಪರೀಶ್ರಮಕ್ಕೆ ದಕ್ಕೆ ಬರದಂತೆ ನೋಡಕೊಳ್ಳಬೇಕಾಗಿದೆ' ಎಂದರು. 'ನಾನ್ನ ಸೇವಾ ಅವಧಿಯು ಮುಗಿಯುವ ಹಂತದಲ್ಲಿದ್ದು ಈ ಸಂಧರ್ಭದಲ್ಲಿ ನಮ್ಮ ಕವಿತಾಳ ಠಾಣೆಗೆ ದೇಶದ ಉತ್ತಮ ಠಾಣೆ ಎಂಬ ಪ್ರಶಸ್ತಿ ದೊರಕಿದ್ದು ನನ್ನ ಸುದೈವ ಈ ಪ್ರಶಸ್ತಿಯು ಈ



ಹಿಂದೆ ಕರ್ತವ್ಯ ನಿರ್ವಹಿಸಿದ ಅಧಿಕಾರಿಗಳಿಗೂ ಮತ್ತು ಸಿಬ್ಬಂದಿ ವರ್ಗದ ಕಾರ್ಯಕ್ಷಮತೆಯ, ಅಷ್ಟೆ ಅಲ್ಲದೆ ಕವಿತಾಳ ಪಟ್ಟಣದ ಜನತೆಯ ಒಳ್ಳೆಯತನ ಪ್ರತಿಫಲವಾಗಿದೆ ಇದೇ ರೀತಿಯಾಗಿ ಮುಂದಿನ ದಿನಮಾನಗಳ್ಲಲಿಯೂ ಸಾರ್ವಜನಿಕರ ಸಹಕಾರ ಹೀಗೆ ಮುಂದು ವರೆಯಲಿ' ಎಂದು ಹೇಳಿದರು. ಪಟ್ಟಣಪಂಚಾಯತಿಯಲ್ಲಿ ನೂತನ ಅಧ್ಯಕ್ಷೆ ರಾಜೇಶ್ವರಿ ತಿಪ್ಪಯ್ಯಸ್ವಾಮಿ ದ್ವಜಾರೋಹಣವನ್ನು ಮಾಡಿದರು, ಮುಖ್ಯಾಧಿಕಾರಿ ಜಸ್‌ಪಾಲ್ ಸಿಂಗ್, ಪಟ್ಟಣ ಪಂಚಾಯತಿ ಸದಸ್ಯರು,ಸಿಬ್ಬಂದಿಗಳು ಮತ್ತು ಪಟ್ಟಣದ ವಿವಿಧ ಸಂಘಟನೆಗಳ ಮುಖಂಡರು, ಗಣ್ಯಮಾನ್ಯರು ಉಪಸ್ಥಿತರಿದ್ದರು. ಬಾಲಕಿಯರ ಸರಕಾರಿ ಪ್ರೌಢಶಾಲೆಯಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮಂಜುನಾಥ ಮಂದಕಲ್ ದ್ವಜಾರೋಹಣ ಮಾಡಿದರು, ಎಸ್‌ಡಿಎಂಸಿ ಸದಸ್ಯರಾದ ಶಿವಲಿಂಗಪ್ಪಗೌಡ ಹುಸೇನಪುರ, ಮಾನ್‌ಸಿಂಗ್ ದಡೇದರ್, ರಮೇಶ್, ವೆಂಕಟೇಶ, ಮುಖ್ಯಶಿಕ್ಷಕಿ ಮುಂಜುಳಾ ಅಂಗಡಿ, ಶಿಕ್ಷಕರಾದ ಸಿದ್ರಾಮೇಶ್, ಗಿರೀಶ್ ಅಂಗಡಿ, ಪ್ರಾಣೇಶ್ ಸೇರಿದಂತೆ ಇನ್ನಿತೆ ಶಿಕ್ಷಕ ಶಿಕ್ಷಕೀಯರು ಉಪಸ್ತಿತರಿದ್ದರು.

ಸರ್ಕಾರಿ ಪ್ರೌಢಶಾಲೆಯಲ್ಲಿ ಪ್ರಭಾರಿ ಮುಖ್ಯಗುರು ರಾಯನಗೌಡ ದ್ವಜಾರೋಹಣ ಮಾಡಿದರು ಶಿಕ್ಷಕರಾದ ಹನುಮಂತಪ್ಪ ಮತ್ತಿತರರು ಉಪಸ್ಥಿತರಿದ್ದರು, ಸಮುದಾಯ ಆಸ್ಪತ್ರೆ, ಸರಕಾರಿ ಹಿರಿಯ ಪ್ರಾಥಮಿಕ ಕನ್ಯಾಶಾಲೆ, ಉನ್ನತೀಕರಿಸಿದ ಹಿರಿಯ ಪ್ರಾತಮಿಕ ಶಾಲೆ, ಮಾಡೆಲ್ ಶಾಲೆ, ನವಚೆತನ, ವಾಸವಿ ವಿದ್ಯಾವಿಕಾಸ ಆಂಗ್ಲ ಮಾದ್ಯಮ ಶಾಲೆ ಸೇ–ರಿದಂತ ವಿವಿಧ ಸಹಕಾರಿ ಸಂಘ ಸಂಸ್ಥೆಗಳು ದ್ವಜಾರೋಹಣ ಮಾಡುವ ಮೂಲಕ 77ನೇ ಗಣರಾಜ್ಯೋತ್ಸವಕ್ಕೆ ಮೆರಗು ನೀಡಿದ್ದಾರೆ.

## ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಸಂಸ್ಕರಣ ಸಹಕಾರ ಸಂಘದಲ್ಲಿ ಗಣರಾಜ್ಯೋತ್ಸವ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದಲ್ಲಿ ಜನವರಿ 26ರಂದು ಗಣರಾಜ್ಯೋತ್ಸವ ಆಚರಿಸಲಾಯಿತು. ಸಂಘದ ಅಧ್ಯಕ್ಷರಾದ ಪತಂಗೆ ಜಯವಂತರಾವ್ ಅವರು ಸಂಘದ ಆಡಳಿತ ಕಚೇರಿಯಲ್ಲಿ ಮತ್ತು ಉಪಾಧ್ಯಕ್ಷರಾದ ಶಶಿಧರ ಪಾಟೀಲ್ ಅವರು ಗಂಜ್ ಕಚೇರಿಯಲ್ಲಿ ಧ್ವಜಾರೋಹಣ ನೆರವೇರಿಸಿದರು.**

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷರಾದ ಪತಂಗೆ ಜಯವಂತರಾವ್ ಅವರು ಮಾತನಾಡಿ, ಭಾರತವು ಸಾರ್ವಭೌಮ ಮತ್ತು ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ. ಸಂವಿಧಾನದ ರಚನೆಗೆ ಕೊಡುಗೆ ನೀಡಿದ ಪ್ರತಿಯೊಬ್ಬ ಮಹನಿಯರನ್ನು ಸ್ಮರಿಸುವ ದಿನ ಇದಾಗಿದೆ. ಸಂವಿಧಾನ ಕೇವಲ ದಾಖಲೆಯಲ್ಲ; ಇದು ನಮ್ಮ ಪ್ರಜಾಪ್ರಭುತ್ವ ರಾಷ್ಟ್ರದ ಆತ್ಮವಾಗಿದೆ. ಎಲ್ಲರಿಗೂ ನ್ಯಾಯ, ಸಮಾನತೆ ಮತ್ತು ಸ್ವಾತಂತ್ರ್ಯವನ್ನು ಖಾತ್ರಿಪಡಿಸುತ್ತದೆ. ಆರ್ಥಿಕವಾಗಿ ಅಭಿವೃದ್ಧಿ ಹೊಂದುವುದು ಮಾತ್ರವಲ್ಲದೆ ಸಾಮಾಜಿ–ಕ ಸಾಮರಸ್ಯ ಮತ್ತು ಸಾಂಸ್ಕೃತಿ–ಕ ಶ್ರೀಮಂತಿಕೆಯಲ್ಲಿ ಬೆಳೆಯುತ್ತಿರುವ ಭಾರತಕ್ಕಾಗಿ ಕೆಲಸ ಮಾಡಲು ನಾವು ಇಂದು ಪ್ರತಿಜ್ಞೆ ಮಾಡೋಣ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸಂಘದ ಪ್ರಧಾನ ವ್ಯವಸ್ಥಾಪಕರಾದ ಬಂದಯ್ಯ ಸ್ವಾಮಿ, ವ್ಯವಸ್ಥಾಪಕರಾದ ನರಸಿಂಹಪ್ಪ, ಲೇಖಪಾಲಕರಾದ ನರಸಿಂಹಪ್ಪ, ಎಂ.ಮಲ್ಲಿಕಾರ್ಜುನ, ರೇಖಮ್ಮ, ಎಂ.ನಾಗರಾಜ್ ಮತ್ತು ಇನ್ನೀತರರು ಉಪಸ್ಥಿತರಿದ್ದರು.

## ರಾಯಚೂರು ಗ್ರಾಮೀಣ ಶಾಸಕರ ಕಾರ್ಯಾಲಯದಲ್ಲಿ ಗಣರಾಜ್ಯೋತ್ಸವ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಗ್ರಾಮೀಣ ಶಾಸಕರ ಕಾರ್ಯಾಲಯದಲ್ಲಿ ಜನವರಿ 26ರಂದು 77ನೇ ಗಣ–ರಾಜೋತ್ಸವದ ಅಂಗವಾಗಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಧ್ವಜಾರೋಹಣ ನೆರವೇರಿಸಿದರು.**



ಇದೆ ವೇಳೆ ಶಾಸಕರು, ನಾಡಿನ ಸಮಸ್ತ ಜನತೆಗೆ ಗಣ–ರಾಜ್ಯೋತ್ಸವ ದಿನದ ಹಾರ್ದಿಕ ಶುಭಾಶಯಗಳನ್ನು ತಿಳಿಸಿದರು. ರಾಜಪ್ರಭುತ್ವದ ವ್ಯವಸ್ಥೆಯಿಂದ ನಾವುಗಳು ಹೊರಬಂದು, ಪ್ರಜೆಗಳೇ ಮುಖ್ಯ ಎನ್ನುವ ಪ್ರಜಾಪ್ರಭುತ್ವದ ಆಡಳಿತಕ್ಕೆ ನಾವೆಲ್ಲರೂ ಬದ್ಧರಾಗಿದ್ದೇವೆ. ದೇಶದ ಆಡಳಿತದ ನೀತಿ ನಿರೂಪಣೆ ತಿಳಿಸುವ ಸಂವಿಧಾನ ಮತ್ತು ಸಂವಿಧಾನದ ಆಶಯಗಳಿಗೆ ನಾವು ಬದ್ಧರಾಗಿ ಸಾಗಬೇಕು. ಸಂವಿಧಾನ ಜಾರಿಗೆ ಶ್ರಮಿಸಿದ ಎಲ್ಲ ಮಹನೀಯರನ್ನು ಸ್ಮ–ರಿಸೋಣ ಎಂದು ಇದೆ ವೇಳೆ ಶಾಸಕರು ಸಂದೇಶ ನೀಡಿದರು. ಈ ಸಂದರ್ಭದಲ್ಲಿ ಗಿಲ್ಲೇಸೂಗುರ ಮತ್ತು ದೇವಸೂಗುರ ಬ್ಲಾಕ್ ಅಧ್ಯಕ್ಷರು, ಹಿರಿಯ ಮುಖಂಡರು, ಮಹಿಳಾ ಮುಖಂಡರು ಮತ್ತು ಇನ್ನೀತರರು ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಸಂವಿಧಾನದ ಆಶಯಗಳು ಸಾಕಾರಗೊಳ್ಳಬೇಕು: ಶಾಸಕ ನಾಡಗೌಡ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಭಾರತದ ಸಂವಿಧಾನ ಎಲ್ಲ–ರಿಗೂ ಸಮಾನ ಹಕ್ಕುಗಳನ್ನು ನೀಡಿದೆ. ಅದು ಎಲ್ಲ ದೇಶವಾಸಿಗಳ ಹಿತವನ್ನು ಬಯಸುತ್ತದೆ, ಜಾತಿ ವರ್ಗ ಹಾಗೂ ಧರ್ಮದ ಆಧಾರದಲ್ಲಿ ವ್ಯತ್ಯಾಸ ಮಾಡದೇ ನಾವೆಲ್ಲರೂ ಭಾರತೀಯರು ನಾವೆಲ್ಲ ಒಂದು ಎಂಬ ಭಾವನೆ ಎಲ್ಲರಲ್ಲೂ ಬರಬೇಕಾಗಿದೆ ಎಂದು ಕೆ ಎಸ್ ಡಿ ಎಲ್ ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡ ಹೇಳಿದರು.**

ಪಟ್ಟಣದ ಸರ್ಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆ ಆವರಣದಲ್ಲಿ ತಾಲೂಕಾಡಳಿತದ ವತಿಯಿಂದ ಆಯೋಜಿಸಿದ್ದ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಡಾ.ಬಿ ಆರ್ ಅಂಬೇಡ್ಕರ್ ಅವರು ನಮಗೆ ವಿಶ್ವ ಶ್ರೇಷ್ಠ ಸಂವಿಧಾನವನ್ನು ಕೊಟ್ಟು ಹೋಗಿದ್ದಾರೆ ಅದರ ರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಬೇಕು ಸಂವಿಧಾನದಿಂದಲೇ ದೇಶ ಸದೃಢ ವಾಗಲು ಸಾಧ್ಯ, ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮನ್ನು ಸಮರ್ಪಿಸಿದ ಮಹಾತ್ಮ ಗಾಂಧಿಯವರ ತ್ಯಾಗ ಬಲಿದಾನವನ್ನು ನಾವೆಂದೂ ಮರೆಯಬಾರದು ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನಗಳನ್ನು ದುರ್ಬಲಗೊಳಿಸುವ ಕಾರ್ಯ ಮಾಡಬಾರದು. ಎಲ್ಲರೂ ಒಂದಾಗಿ ದೇಶ ಕಟ್ಟುವ ಕಾರ್ಯ ಮಾಡಬೇಕಾಗಿದೆ.




ನಮ್ಮ ಸರ್ಕಾರವು ಐದು ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದು ರಾಜ್ಯದ ಅಭಿವೃದ್ಧಿಗೆ ಪೂರಕವಾಗಿದೆ ಸಾಕಷ್ಟು ಫಲಾನುಭವಿಗಳು ಇದರ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ, ರಾಜ್ಯ ಹಾಗೂ ಕೇಂದ್ರದ ಸಮನ್ವಯತೆಯೊಂದಿಗೆ ದೇಶದ ಪ್ರಗತಿ ಸಾಧ್ಯ ಇದಕ್ಕೆ ಒಕ್ಕೂಟ ವ್ಯವಸ್ಥೆಯ ಪಾಲನೆ ಅಗತ್ಯವಾಗಿದೆ. ಇಡೀ ಮತಕ್ಷೇತ್ರ ಅಭಿವೃದ್ಧಿಯಡೆಗೆ ಹೋಗುತ್ತಿದೆ ಇದರಲ್ಲಿ ನಿಮ್ಮೆಲ್ಲರ ಸಹಕಾರವು ಇದೆ. ಪಟ್ಟಣದಲ್ಲಿ ಪ್ರಜಾಸೌಧ ಕಟ್ಟಡಕ್ಕೆ ಮಂಜೂರಾತಿ ಸಿಕ್ಕಿದೆ ಒಂದು ವರ್ಷದ ಒಳಗಾಗಿ ಇದರ ನಿರ್ಮಾಣ ಆಗಲು ತಾಲೂಕಾಡಳಿತ ಆಸಕ್ತಿ ವಹಿಸಬೇಕು ಅದರಂತೆ ನೂತನ ತಾಲೂಕಿನ ಎಲ್ಲಾ ಕಚೇರಿಗಳು ಆದಷ್ಟು ಬೇಗ ಆರಂಭಿಸಲು ಶಕ್ತಿ ಮೀರಿ ಪ್ರಯತ್ನಿಸಲಾಗುವುದು.

ಭವ್ಯ ಭಾರತದ ನಿರ್ಮಾಣ–ಕ್ಕೆ ಎಲ್ಲಾರು ಒಂದಾಗಿ ಕೆಲಸ ಮಾಡೋಣ ಎಂದರು.ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದ ಸಾಧಕರಿಗೆ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತಾಲೂಕಾ ಡಳಿತದಿಂದ ಸನ್ಮಾನಿಸಲಾಯಿತು ಹಾಗೂ ಶಿಶು ಅಭಿವೃದ್ಧಿ ಇಲಾಖೆಯು ಅಂಗನವಾಡಿಯ ಎಲ್.ಕೆ.ಜಿ. ಮತ್ತು ಯುಕೆಜಿ ಮಕ್ಕಳಿಗೆ ಕೊಡಮಾಡಿದ ಸ್ಮಾರ್ಟ್ ಟಿವಿಗಳನ್ನು ಅಪ್ಪಾಜಿ ನಾಡಗೌಡರು ವಿತರಿಸಿದರು. ತಹಸಿಲ್ದಾರ್ ಡಾ.ವಿನಯಾ ಹೂಗಾರ ಧ್ವಜಾರೋಹಣ ನೆರವೇರಿಸಿದರು. ಕಾರ್ಯಕ್ರಮದಲ್ಲಿ ತಾಪಂ ಇಓ ಅನಸೂಯಾ ಚಲವಾದಿ, ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ,ಸಿಡಿಪಿಓ ಶಿವಮೂರ್ತಿ ಕುಂಬಾರ, ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರಮಠ, ಗ್ಯಾರಂಟಿ ಸಮಿತಿಯ ಸಂಗಮೇಶ ದೇಸಾಯಿ, ಶಿರಸ್ತೆದಾರ ಜೈನಾಪೂರ, ಪಿಎಸ್ಐ ಜ್ಯೋತಿ ಖೋತ್, ಪಟ್ಟಣದ ಗಣ್ಯರು, ಜನಪ್ರತಿನಿಧಿಗಳು, ಕನ್ನಡ ಪರ ಸಂಘಟನೆ, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ವಿವಿಧ ಇಲಾಖೆಗಳ ಅಧಿಕಾ–ರಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

# ರಾಯಚೂರು ಜಿಲ್ಲೆಯ ಜನತೆಗೆ ಗಣರಾಜ್ಯೋತ್ಸವ ಸಂದೇಶ ನೀಡಿದ ಜಿಲ್ಲಾ ಉಸ್ತುವಾರಿ ಸಚಿವರು
# ಸಂವಿಧಾನ ಬದ್ಧ ಒಕ್ಕೂಟ ವ್ಯವಸ್ಥೆ ಉಳಿಸುವ ಕಾರ್ಯವಾಗಲಿ: ಡಾ.ಶರಣಪ್ರಕಾಶ ಪಾಟೀಲ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಭಾರತ ಸಂವಿಧಾನವು ವಿಶ್ವಕ್ಕೆ ಮಾದ–ರಿಯಾದ ಸಂವಿಧಾನವಾಗಿದೆ. ಈ ಸಂವಿಧಾನ ಬದ್ದ ಒಕ್ಕೂಟ ವ್ಯವಸ್ಥೆಯನ್ನು ಉಳಿಸುವ ಕಾರ್ಯವಾಗಬೇಕಿದೆ ಎಂದು ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಹೇಳಿದರು. ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 26ರಂದು ಜಿಲ್ಲಾಡಳಿತದಿಂದ ನಡೆದ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.**

ಸ್ವಾತಂತ್ರ?ಯ ದಿನಾಚರಣೆ ಮತ್ತು ಗಣ–ರಾಜ್ಯೋತ್ಸವ ದಿನಾಚರಣೆಗಳು ನಮ್ಮ ಮಹತ್ವದ ರಾಷ್ಟ್ರೀಯ ಹಬ್ಬಗಳಾಗಿವೆ. ಸ್ವಾತಂತ್ರ?ಯದ ಬಳಿಕ ನಮ್ಮ ದೇಶದಲ್ಲಿ, ಎಲ್ಲ ರಂಗದಲ್ಲಿ ಸಮಾನತೆ ಸಿಗಬೇಕು ಎಂಬುದು ಮಹಾತ್ಮ ಗಾಂಧೀಜಿ, ಸುಭಾಷಚಂದ್ರ ಬೋಸ್, ಸರ್ದಾರ್ ವಲ್ಲಭಭಾಯಿ ಪಟೇಲ್ ಸೇರಿದಂತೆ ನಮ್ಮ ಅನೇಕ ಮಹನಿಯರ ಸದಾಶಯವಾಗಿತ್ತು. ಆಗ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಸಂವಿಧಾನ ರಚನೆಯ ಜವಾಬ್ದಾರಿ ವಹಿಸಿದರು. ಬೇರೆ ಬೇರೆ ದೇಶಗಳ ಸುತ್ತಿ, ಸಾಕಷ್ಟು ಅಧ್ಯಯನ ನಡೆಸಿ ಅಂಬೇಡ್ಕರ್ ಅವರು ಸಂವಿಧಾನ ರಚಿಸುವಲ್ಲಿ ಮಹತ್ವದ ಪಾತ್ರ ವಹಿಸಿದರು. ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ಈ ನಮ್ಮ



ನೆಲದಲ್ಲಿ ಸಾವಿರಾರು ಭಾಷೆಗಳಿವೆ, ಸಂಸ್ಕೃತಿ, ಜನ ಜೀವನ ಪದ್ದತಿಗಳಿವೆ. ಇಂತಹ ಎಲ್ಲ ಜನತೆಗೂ ಸಮಾನ ನ್ಯಾಯ ಸಿಗುವ ಕಾರ್ಯವನ್ನು ಸಂವಿಧಾನ ಶಿಲ್ಪಿ, ಮುತ್ಸದ್ಧಿ ಡಾ.ಬಿ.ಆರ್.ಅಂಬೇಡ್ಕರ ಅವರು ಸಂವಿಧಾನದ ಮೂಲಕ ಮಾಡಿದರು. ಸಂವಿಧಾನ ರಚನಾ ಸಭೆಯಲ್ಲಿ ಸಂವಿಧಾನದ ಬಗ್ಗೆ ಸಾಕಷ್ಟು ಚರ್ಚೆಯಾಗಿದೆ. ಪ್ರತಿ ಶಬ್ದದ ಬಗ್ಗೆಯೂ ಅವಲೋಕನ ನಡೆದಿದೆ. ಸಂವಿಧಾನದ ಪ್ರತಿ ವಿಚಾರಗಳ ಬಗ್ಗೆಯೂ ವರೆಗಲ್ಲಿಗೆ ಹಚ್ಚಿ, ಚರ್ಚಿಸಿ ಎಲ್ಲ ವಿಚಾರಗಳು ಜನಪರವಾಗಿವೆ ಎಂದು ನಿರ್ಧರಿಸಲಾಗಿದೆ.

ಪ್ರತಿ ಶಬ್ದ, ಪ್ರತಿ ವಿಚಾರದ ಬಗ್ಗೆ ತಾಸುಗಟ್ಟಲೇ, ಇಡೀ ದಿನ ಚರ್ಚೆಯಾಗಿದೆ. ಅದಕ್ಕಾಗಿಯೇ ನಮ್ಮ ಸಂವಿಧಾನಕ್ಕೆ ದೊಡ್ಡ ಶಕ್ತಿ ಇದೆ. ಸಂವಿಧಾನವನ್ನು ನಾವೆಲ್ಲರೂ ಒಪ್ಪಿಕೊಂಡಿದ್ದೇವೆ. ಈ ಸಂವಿಧಾನ ಸೂಕ್ತ ಎಂದು ನಮಗೆ ನಾವೇ ಅರ್ಪಿಸಿ ಕೊಂಡಿದ್ದೇವೆ; ಸ್ವೀಕರಿಸಿದ್ದೇವೆ. ಹಾಗಾಗಿ ನಾವೆಲ್ಲರೂ ಸಂವಿಧಾನ ಒಪ್ಪಿಕೊಳ್ಳಬೇಕು. ಈ ಸಂವಿಧಾನದ ಮುಂದೆ ಯಾರೂ ದೊಡ್ಡವರಲ್ಲ ಎಂದು ತಿಳಿಸಿದರು. ಸಂವಿಧಾನದ ತಳಹದಿಯಲ್ಲಿ ರಚನೆಯಾದ ನಮ್ಮ ಸರ್ಕಾರಗಳು 77 ವರ್ಷ ಗಟ್ಟಿ ಬುನಾದಿ ಹಾಕಿವೆ. ಇದುವರೆಗೆ ನಡೆದ ಪ್ರಗತಿ ಅಪಾರವಾಗಿದೆ. ಸಂವಿಧಾನವು ನಮಗೆಲ್ಲರಿಗೂ ಸರಿಯಾದ ದಿಕ್ಕಿಗೆ ಒಯ್ಯುತ್ತಿದೆ ಎಂಬುದರ ಪ್ರಮಾಣವೇ ಈ ಗಣ–ರಾಜ್ಯೋತ್ಸವ ದಿನಾಚರಣೆಯಾಗಿದೆ ಎಂದರು. ಸಂವಿಧಾನವು ಹೇಳುವ ಈ ಒಕ್ಕೂಟ ವ್ಯವಸ್ಥೆಯನ್ನು ನಾವು ಉಳಿಸಲೇಬೇಕಿದೆ. ಹಾಗಾಗಿ ಈ ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಂದಾಗಿ ಕೆಲಸ ಮಾಡಿದಾಗ ಅಭಿವೃದ್ಧಿ ಸಾಧ್ಯವಾಗಲಿದೆ.

ಒಕ್ಕೂಟದ ವ್ಯವಸ್ಥೆಯನ್ನು ನಮ್ಮ ಕೇಂದ್ರ ಸರ್ಕಾರವು ಕಾಪಾಡಬೇಕು ಎಂಬುದು ನನ್ನ ಮನವಿಯಾಗಿದೆ ಎಂದು ತಿಳಿಸಿದ ಸಚಿವರು, ಈ ಒಕ್ಕೂಟದ ವ್ಯವಸ್ಥೆಗೆ ಧಕ್ಕೆ ತರುವ ಕೆಲಸವನ್ನು ಯಾರೂ ಮಾಡಬಾರದು ಎಂದರು. ಸಂವಿಧಾನಕ್ಕಿಂತ ಯಾರೂ ದೊಡ್ಡವರಲ್ಲ; ಈ ಸಂವಿಧಾನದಡಿ ದೇಶ ಕಟ್ಟುವ ಕಾರ್ಯವು ಕೇಂದ್ರ ಮತ್ತು ರಾಜ್ಯ ಸರ್ಕಾರಗಳದ್ದಾಗಿದೆ ಎಂದರು. ನಮ್ಮ ಭಾಗಕ್ಕೆ 371ಜೆ ಕೊಡುಗೆ ಅಪರವಾಗಿದೆ. ಇದರಿಂದಾಗಿ ಈ ಭಾಗದ ಲಕ್ಷಾಂತರ ಮಕ್ಕಳಿಗೆ ಉದ್ಯೋಗ ಲಭಿಸಿದೆ. ಇದುವರೆಗೆ ಕೆಕೆಆರ್ ಡಿಬಿಗೆ 18 ಸಾವಿರ ಕೋಟಿ ರೂ.ಹಣ ಹರಿದು ಬಂದಿದೆ. ಇದು ದೊಡ್ಡ ಸಾಧನೆಯಾಗಿದೆ. ಈ ದಿಶೆಯಲ್ಲಿ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ ಜಿ ಅವರ ಕೊಡುಗೆ ಗಮನಾರ್ಹವಾಗಿದೆ. ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು ಜನಪರವಾಗಿ ಆಲೋಚಿಸಿ ಉತ್ತಮ ಕಾರ್ಯ ಮಾಡುತ್ತಿದ್ದಾರೆ.

ಪಂಚ ಗ್ಯಾರಂಟಿ ಯೋಜನೆಯಡಿ ಇದುವರೆಗೆ 1 ಲಕ್ಷ 20 ಸಾವಿರ ಕೋಟಿ ರೂ ಹಣವನ್ನು ನೇರವಾಗಿ ಜನತೆಗೆ ತಲುಪಿಸಿದ ಸಾಧನೆ ತೋರಿದ್ದೇವೆ. ಇಡೀ ದೇಶದಲ್ಲಿ ಸಮೃದ್ದಿ ಹೊಂದಿದ ರಾಜ್ಯ ನಮ್ಮದಾಗಿದೆ ಎಂದರು. ರಾಯಚೂರು ಜಿಲ್ಲೆಯಲ್ಲಿ ಪಾರದರ್ಶಕ ಆಡಳಿತ ಕೊಡುತ್ತಿದ್ದೇವೆ. ಜನರ ಸದಾಶಯ ಅರಿತು ಕೆಲಸ ಮಾಡುತ್ತಿದ್ದೇವೆ. ವಿಮಾನ ನಿಲ್ದಾಣ ಕಾರ್ಯ ನಡೆಯುತ್ತಿದೆ. ಏಮ್ಸ್ ಸ್ಥಾಪನೆಯ ನಿರ್ಧಾರಕ್ಕೆ ನಮ್ಮ ಸರ್ಕಾರ ಬದ್ಧವಾಗಿದೆ. ಕೇಂದ್ರದ ಮೇಲೆ ಮೇಲಿಂದ ಮೇಲೆ ಒತ್ತಡ ಹಾಕುತ್ತಿದ್ದೇವೆ. ಈ ವೇಳೆ ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ ಅವರು ಅಧ್ಯಕ್ಷತೆ ವಹಿಸಿದ್ದರು. ಶಾಸಕರಾದ ಬಸನಗೌಡ ದದ್ದಲ್, ಎ ವಸಂತಕುಮಾರ, ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ಉಪಾಧ್ಯಕ್ಷರಾದ ಬಸೀರ್ ಅಹ್ಮದ್, ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷರಾದ ಪವನ ಕಿಶೋರ ಪಾಟೀಲ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಪಂ ಸಿಇಓ ಈಶ್ವರ್ ಕಾಂದೂ, ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ, ತಹಸೀಲ್ದಾರ ಸುರೇಶ ವರ್ಮಾ ಹಾಗೂ ಜಿಲ್ಲೆಯ ನಾಗರಿಕರು, ಸಂಘ ಸಂಸ್ಥೆಗಳ ಪ್ರಮುಖರು,

ಇನ್ನೀತರ ಗಣ್ಯರು, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಮತ್ತು ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳ ಪಾಲಕರು ಇದ್ದರು. ಶಿಕ್ಷಕಿಯರಾದ ಯಶೋಧಾ ವೈ.ಬಿ. ಹಾಗೂ ಮಹೇಶ್ವರಿ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು. ಆಕರ್ಷಕ ಪಥ ಸಂಚಲನ: ಧ್ವಜಾರೋಹಣಕ್ಕೆ ಮೊದಲು ಸಚಿವರು, ಸಕಲ ತಂಡಗಳ ಪರಿವೀಕ್ಷಣೆ ಮಾಡಿದರು. ಬಳಿಕ 18 ತಂಡಗಳಿಂದ ಅತ್ಯಂತ ಸುಂದರವಾಗಿ, ಶಿಸ್ತಿನಿಂದ ಶೀಘ್ರ ನಡಿಗೆಯ ಆಕರ್ಷಕ ಪಥ ಸಂಚಲನ ನಡೆಯಿತು. ಬ್ಯಾಂಡ್ ಮಾಸ್ಟರ್ ಯಂಕಪ್ಪ ಹಾಗೂ ತಂಡದವರು ಇದೆ ವೇಳೆ ವಾದ್ಯ ನುಡಿಸಿದರು. ವಿದ್ಯಾರ್ಥಿಗಳಿಂದ ಆಕರ್ಷಕ ನೃತ್ಯ: ಸಮಾರಂಭದಲ್ಲಿ ನಗರದ ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಸುಗ್ಗಿ ಪದ ಸೇರಿದಂತೆ ದೇಶ ಭಕ್ತಿಗೀತೆಗಳಿಗೆ ನೃತ್ಯ ನಡೆಸಿ, ಸೇರಿದ್ದ ಜನಸ್ತೋಮದ ಚಪ್ಪಾಳೆ ಗಿಟ್ಟಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### M.Sc. ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ

M.Sc. ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ (MIT) ಎಂಬುದು 2 ವರ್ಷಗಳ ಸ್ನಾತಕೋತ್ತರ ಕೋರ್ಸ್ ಆಗಿದ್ದು, ಒಖಐ, ಅಖ ಸ್ಕ್ಯಾನ್, ಅಲ್ಟ್ರಾಸೌಂಡ್, ಮತ್ತು ಎಕ್ಸ್-ರೇ ಯಂತಹ ಸುಧಾರಿತ ರೋಗನಿರ್ಣಯ ತಂತ್ರಗಳಲ್ಲಿ ಆಳವಾದ ಜ್ಞಾನ ಮತ್ತು ಪ್ರಾಯೋಗಿಕ ತರಬೇತಿಯನ್ನು ನೀಡುತ್ತದೆ. ಇದು ರೇಡಿಯಾಲಜಿ ಕ್ಷೇತ್ರದಲ್ಲಿ ತಜ್ಞರಾಗಲು, ರೋಗಿಗಳ ಆರೈಕೆ ಮತ್ತು ರೋಗ ಪತ್ತೆಹಚ್ಚುವಿಕೆಯಲ್ಲಿ ಸಹಾಯ ಮಾಡಲು ಅತ್ಯುತ್ತಮ ಅವಕಾಶವಾಗಿದೆ. ವೈದ್ಯಕೀಯ ಇಮೇಜಿಂಗ್ ತಂತ್ರಜ್ಞಾನದಲ್ಲಿ ಎಂ.ಎಸ್ಸಿ. ಪದವಿಯು ಇಮೇಜಿಂಗ್ ವಿಜ್ಞಾನ ತಂತ್ರಜ್ಞಾನದಲ್ಲಿ ವೃತ್ತಿಪರ ವೃತ್ತಿಜೀವನವನ್ನು ಅನುಸರಿಸುವವರನ್ನು ಗುರಿಯಾಗಿರಿಸಿಕೊಂಡಿದೆ. ಆಧುನಿಕ ಇಮೇಜಿಂಗ್ ವಿಜ್ಞಾನದ ವೈಜ್ಞಾನಿಕ ತತ್ವಗಳಲ್ಲಿ ಮತ್ತು ರೇಡಿಯೋ ರೋಗನಿರ್ಣಯ ಕ್ಷೇತ್ರದಲ್ಲಿ ಈ ತತ್ವಗಳ ಅನ್ವಯದಲ್ಲಿ ವಿಶೇಷ ತರಬೇತಿಯನ್ನು ನೀಡಲು ಇದನ್ನು ವಿನ್ಯಾಸಗೊಳಿಸಲಾಗಿದೆ. ಇಮೇಜಿಂಗ್ ವಿಜ್ಞಾನದ ತಂತ್ರಜ್ಞಾನದಲ್ಲಿ ಅನುಭವ ಹೊಂದಿರುವ ಪದವೀಧರರಿಗೆ ಸೂಕ್ತವಾದ ಉನ್ನತ ಪದವಿ ಕೋರ್ಸ್ ಆಗಿ ಇದನ್ನು ವಿನ್ಯಾಸಗೊಳಿಸಲಾಗಿದೆ. ಆಜೀವ ಕಲಿಕೆಯಲ್ಲಿ ತೊಡಗಿರುವ ಸಮುದಾಯಕ್ಕಾಗಿ ಅರ್ಹ, ರೋಗಿಯನ್ನು ಕೇಂದ್ರೀಕರಿಸಿದ, ಸಹಾನುಭೂತಿಯುಳ್ಳ, ವಿಮರ್ಶಾತ್ಮಕ ಚಿಂತಕರಿಗೆ ರೋಗನಿರ್ಣಯ ರೇಡಿಯೋಗ್ರಾಫರ್/ತಂತ್ರಜ್ಞರಿಗೆ ವಿದ್ಯಾರ್ಥಿಗಳಿಗೆ ತರಬೇತಿ ನೀಡುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಒ.ಖಛಿ ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ ಕೋರ್ಸ್ ವಿವರಗಳು: ಕೋರ್ಸ್ ಹೆಸರು: ಒ.ಖಛಿ. ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ (M.Sc.MIT). ಅವಧಿ: 2 ವರ್ಷಗಳು. ಅರ್ಹತೆ: ಸಂಬಂಧಿತ ವಿಷಯಗಳಲ್ಲಿ (B.Sc. in Radiology/Medical Imaging Technology) ಕನಿಷ್ಠ 50% ಅಂಕಗಳೊಂದಿಗೆ ಪದವಿ. ಕೋರ್ಸ್ ವಿಷಯಗಳು: ಸುಧಾರಿತ ಇಮೇಜಿಂಗ್ ತಂತ್ರಗಳು: MRI, CT ಸ್ಕ್ಯಾನ್, ಅಲ್ಟ್ರಾಸೌಂಡ್, ಡಿಜಿಟಲ್ ರೇಡಿಯೋಗ್ರಫಿ, ಮ್ಯಾಮೊಗ್ರಫಿ. ಕ್ಲಿನಿಕಲ್ ಅಪ್ಲಿಕೇಶನ್‌ಗಳು: ರೇಡಿಯಾಲಜಿ, ನ್ಯೂಕ್ಲಿಯರ್ ಮೆಡಿಸಿನ್, ಇಂಟರ್ವೆನ್ಷನಲ್ ರೇಡಿಯಾಲಜಿ. ತಾಂತ್ರಿಕ ಕೌಶಲ್ಯಗಳು: ವಿಕಿರಣ ಸುರಕ್ಷತೆ, ಚಿತ್ರ ಸಂಸ್ಕರಣೆ, ಗುಣಮಟ್ಟದ ಭರವಸೆ (Quality Assurance). ಉದ್ಯೋಗಾವಕಾಶಗಳು: ರೇಡಿಯಾಲಜಿಸ್ಟ್ ಅಸಿಸ್ಟೆಂಟ್. ಒಖಐ/ಅಖ ಟೆಕ್ನಾಲಜಿಸ್ಟ್. ಕ್ಲಿನಿಕಲ್ ಅಪ್ಲಿಕೇಶನ್ ಸ್ಪೆಷಲಿಸ್ಟ್. ರೇಡಿಯಾಲಜಿ ಇಲಾಖೆಯ ವ್ಯವಸ್ಥಾಪಕರು. ಶಿಕ್ಷಣ ತಜ್ಞರು (Academician). ತರಬೇತಿ: ಆಸ್ಪತ್ರೆಗಳಲ್ಲಿ ಪ್ರಾಯೋಗಿಕ ತರಬೇತಿ ಮತ್ತು ರೋಗಿಗಳ ಆರೈಕೆ.

## ದೇಶವನ್ನು ಏಕೀಕರಣ ಮಾಡಿದವರು ಸರ್ದಾರ್ ವಲ್ಲಭಭಾಯಿ ಪಟೇಲ್ :ಬಸವಣಪ್ಪ ಕಲಶೆಟ್ಟಿ

❏ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಬಾರತ ದೇಶ ಸ್ವಾತಂತ್ರ ಪಡೆದ ನಂತರದಲ್ಲಿ ರಾಜಕೀಯವಾಗಿ ಮಾತ್ರವಲ್ಲ, ಭೌಗೋಳಿಕವಾಗಿಯೂ ಚೂರು ಚೂರಾದ ಸ್ಥಿತಿಯಲ್ಲಿತ್ತು. 560ಕ್ಕೂ ಹೆಚ್ಚು ಸಂಸ್ಥಾನಗಳು, ಮತ್ತು ಸ್ವಾಯತ್ತತೆಯ ಆಕಾಂಕ್ಷೆಗಳು ದೇಶದ ಏಕತೆಗೆ ದೊಡ್ಡ ಸವಾಲಾಗಿ ನಿಂತಿದ್ದವು. ಇಂತಹ ಸಂಕಷ್ಟದ ಹೊತ್ತಿನಲ್ಲಿ "ಭಾರತದ ಉಕ್ಕಿನ ಮನುಷ್ಯ" ಎಂದೇ ಖ್ಯಾತರಾದ ಸರ್ದಾರ್ ವಲ್ಲಭಭಾಯಿ ಪಟೇಲ್ ದೇಶದ ಏಕೀಕರಣವನ್ನು ಮಾಡಿದವರು ಎಂದು ಸಹಾಯಕ ಆಯುಕ್ತ ಬಸವಣಪ್ಪ ಕಲಶೆಟ್ಟ ಹೇಳಿದರು.**

ಅವರಿಂದು ತಾಲೂಕ ಆಡಳಿತ ಆಯೋಜಿಸಿದ್ದ 77 ನೇ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ನೆರವೇರಿಸಿ ನಂತರ ಮಾತನಾಡಿದ ಅವರು, ಬಾರತ ಸ್ವಾತಂತ್ರ್ಯ ನಂತರದ ಸರಕಾರದಲ್ಲಿ ಮೊದಲ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಭ ಬಾಯಿ ಪಟೇಲರು, ರಾಜತಾಂತ್ರಿಕತೆಯ ದೃಢ



ನಿರ್ಧಾರ ಮತ್ತು ಅಗತ್ಯವಿದ್ದಾಗ ಕಠಿಣ ಕ್ರಮಗಳ ಮೂಲಕ ಸಂಸ್ಥಾನಗಳನ್ನು ಭಾರತೀಯ ಒಕ್ಕೂಟಕ್ಕೆ ಸೇರಿಸುವ ಮಹತ್ವದ ಕೆಲಸಕ್ಕೆ ಕೈ ಹಾಕಿದರು. ಹೈದರಾಬಾದ್, ಜುನಾಗಡ , ಕಾಶ್ಮೀರ ಸೇರಿದಂತೆ ಅನೇಕ ಸಂಕೀರ್ಣ ಸಮಸ್ಯೆಗಳ ನಡುವೆ, ಪಟೇಲರು ತೋರಿದ ದೂರದೃಷ್ಟಿ ಮತ್ತು ಧೈರ್ಯವೇ ದೇಶದ ಭವಿಷ್ಯವನ್ನು ನಿರ್ಧರಿಸಿತು.

ಸಂಸ್ಥಾನದ ರಾಜರು ಮತ್ತು ನವಾಬರುಗಳಿಗೆ ಇನ್‌ಸ್ಟ್ರುಮೆಂಟ್ ಆಫ್ ಆಕ್ಸೆಷನ್ ಮೂಲಕ ಭಾರತಕ್ಕೆ ಸೇರುವ ಮಾರ್ಗವನ್ನು ತೆರದ ಪಟೇಲರು, ದೇಶದ ಏಕತೆಗೆ ಧಕ್ಕೆ ತರಬಹುದಾದ ಎಲ್ಲ ಪ್ರಯತ್ನಗಳನ್ನು ಸಮರ್ಥವಾಗಿ ತಡೆದರು. ಹೈದರಾಬಾದ್ ಸಮಸ್ಯೆಯಲ್ಲಿ ಕೈಗೊಂಡ ಆಪರೇಷನ್ ಪೋಲೋ ಭಾರತದ ಏಕತೆಗೆ ಪಟೇಲರ ನಿರ್ಣಾಯಕ ನಾಯಕತ್ವದ ಉದಾಹರಣೆಯಾಗಿ ಉಳಿದಿದೆ. ಅಲ್ಲದೇ ನಮ್ಮ ಸಂವಿಧಾನ ಪ್ರತಿಯೊಬ್ಬರಿಗೂ ಸಮಾನತೆ ಹಾಗೂ ಭಾತೃತ್ವವನ್ನು ತಂದು ಕೊಟ್ಟಿದೆ ಇದರ ಮುಖ್ಯ ರೂವಾರಿ ಡಾ.ಬಿ.ಆರ್. ಅಂಬೇಡ್ಕರ್ ರವರು ಇವರ ಶ್ರಮದ ಪಲವಾಗಿ ನಮ್ಮ ದೇಶ ಆರ್ಥಿಕವಾಗಿ ಬಲಾಢ್ಯವನ್ನು ಹೊಂದಿದೆಯಲ್ಲದೇ ಮುಂದಿನ ದಿನಗಳಲ್ಲಿ ವಿಶ್ವದ ನಂಬರ್ ಒನ್ ದೇಶವಾಗಲಿವೆ ಎಂದರು.

ನಂತರ ಮಾತನಾಡಿದ ಶಾಸಕ ಮಾನಪ್ಪ ವಜ್ಜಲ್ ಸಂವಿಧಾನ ಜಾರಿಯಾಗಿ ಇಂದಿಗೆ 77 ವರ್ಷಗಳು ಕಳೆದಿವೆ. ಅಂದಿನಿಂದ ಇಂದಿನ ವರೆಗೆ ನಮ್ಮ ದೇಶ ಸುಭದ್ರವಾಗಿ ನಡೆಯುತ್ತಿದೆ.

ಮೋದಿಯವರ ದೃಢ ನಿರ್ಧಾರಗಳಿಂದ ದೇಶ ಆರ್ಥಿಕವಾಗಿ ಬಲಾಢ್ಯವಾಗುತ್ತಿದ್ದು, ವಿಶ್ವದಲ್ಲಿಯೇ ಪ್ರಥಮ ಸ್ಥಾನವನ್ನು ಪಡೆದುಕೊಂಡಿದೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ಶಶಿಧರ ಪಾಟೀಲ್, ಪೊಲೀಸ್ ಉಪ ಅಧೀಕ್ಷಕ ದತ್ತಾತ್ರೇಯ ಕರ್ನಾಡ್, ತಹಶೀಲ್ದಾರ್ ಕು.ಸತ್ಯಮ್ಮ, ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್, ಹಾಜಿಬಾಬ ಕಲ್ಯಾಣಿ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಸಾರ್ವಜನಿಕರು ಇದ್ದರು.

## ಹಾಲಾಪೂರ: ಗ್ರಾಮ ಪಂಚಾಯತಿಯಲ್ಲಿ ವಿಶೇಷ ಗ್ರಾಮ ಸಭೆ

❏ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ತಾಲೂಕಿನ ಹಾಲಾಪೂರ ಗ್ರಾಮ ಪಂಚಾಯತಿಯಲ್ಲಿ ಅಧ್ಯಕ್ಷೆ ಸಾಬಮ್ಮ ಗಂಡ ಗಂಗಪ್ಪ ಇವರ ಅಧ್ಯಕ್ಷತೆಯಲ್ಲಿ ವಿಶೇಷ ಗ್ರಾಮ ಸಭೆ ನಡೆಯಿತು. ಗ್ರಾಮ ಸಭೆಯ ಕುರಿತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ವಿಶ್ವನಾಥ ಹೂಗಾರ ಸಭೆಯಲ್ಲಿ ಮಾತನಾಡಿ ಬಹುದಾನದ ಬೇಡಿಕೆಯಾದ ಗ್ರಾಮ ಪಂಚಾಯತಿ ವಿಭಜನೆ ಮಾಡಬೇಕೆನ್ನುವುದು,**

ಜನಸಂಖ್ಯೆ ಆಧಾರದ ಮೇಲೆ, ಸಾರ್ವಜನಿಕರಿಗೆ ದೂರ ಇರುವ ಕಾರಣ ಈಗಾಗಲೇ ಈಗಿರುವ ಅಧ್ಯಕ್ಷರು ಸರ್ವ ಸದಸ್ಯರು, ಪಂಚಾಯತಿ ವ್ಯಾಪ್ತಿಗೆ ಒಳಪಡುವ ಹಳ್ಳಿಗಳ ಗ್ರಾಮಸ್ಥರ ಒತ್ತಾಯದ ಮೇರೆಗೆ



ಮತ್ತು ಗ್ರಾಮ ಪಂಚಾಯಿತಿ ದೊಡ್ಡದಾಗಿದ್ದು ಅದಕ್ಕಾಗಿ ವಿಭಜನೆ ಮಾಡಬೇಕೆಂದು ಆಗ್ರಹ ಇರುವ ಕಾರಣ ಎಲ್ಲರ ಒಪ್ಪಿಗೆಯಿಂದ ಅನುಮೋದನೆಯನ್ನು ಮಾಡಲಾಯಿತು ಹಾಗೂ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಹಿಂಪಡಿದಿರುವ ಹಾಗೂ ಕೇಂದ್ರ ಸರ್ಕಾರವು ಹೊಸದಾಗಿ ಜಾರಿಗೆ ತಂದಿರುವ ವಿಕಸಿತ ಭಾರತ ಗ್ಯಾರಂಟಿ ರೋಜಗಾರ್ ಅಜೀವಿಕ್ ಮಿಷನ್ ಕುರಿತು ಸಮಗ್ರವಾಗಿ ಚರ್ಚಿಸಲು ಈ ಒಂದು ವಿಶೇಷ ಗ್ರಾಮ ಸಭೆಯನ್ನು ಕರೆಯಲಾಯಿತು ಎಂದು ಪಿಡಿಒ ವಿಶ್ವನಾಥ ಹೂಗಾರ ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕೆಡಿಪಿ ಸದಸ್ಯ ಕರಿಯಪ್ಪ, ಜಗದೀಶ್ ಚಂದ್ರಸ್ವಾಮಿ ಅಧ್ಯಕ್ಷರು ಪ್ರಾಥಮಿಕ ಸಹಕಾರಿ ಸಂಘ, ಬಿ ಕರಿಯಪ್ಪ, ಬಸವರಾಜಗೌಡ ವಡಿಗೇರಿ, ಈರನಗೌಡ ದಳಪತಿ, ಸಣ್ಣ ವಾಸನಗೌಡ್ರು, ಬಸವರಾಜ ರಾಮತ್ನಾಳ, ಏಬೆಲ್ ರಾಜ, ಯೋಗೇಶರಾವ್ ದೇಸಾಯಿ, ಶರಣಪ್ಪ ಹಿರೇಮನಿ ಹಾಗೂ ಸಿಬ್ಬಂದಿಗಳಾದ ರಂಗಪ್ಪ, ಗ್ಯಾನಪ್ಪ ಹಾಗೂ ಗ್ರಾಮಸ್ಥರು, ಇನ್ನಿತರರು ಇದ್ದರು.

## ಆದರ್ಶ ವಿದ್ಯಾಲಯಗಳ 6ನೇ ತರಗತಿ ಪ್ರವೇಶಕ್ಕೆ ಅವಕಾಶ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: 2025-26ನೇ ಸಾಲಿನಲ್ಲಿ 2026-27ನೇ ಸಾಲಿನ ಆದರ್ಶ ವಿದ್ಯಾಲಯಗಳಿಗೆ 6ನೇ ತರಗತಿಗೆ ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ. 6ನೇ ತರಗತಿಗೆ ದಾಖಲಾತಿಗಾಗಿ 25-02-2026 ರವರೆಗೂ www. schooleducation. karnataka.gov.in ªÀÄvÀÄÛ www.vidyavahini.karnataka.gov.in ವೆಬ್ ತಾಣಗಳ ಮೂಲಕ ಆದರ್ಶ ವಿದ್ಯಾಲಯ ಮಾದರಿ ಶಾಲೆಯ ಪೋಷಕರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.**

2025-26ನೇ ಸಾಲಿನಲ್ಲಿ ಆಯಾ ತಾಲ್ಲೂಕಿನ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಐದನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅದೇ ತಾಲ್ಲೂಕಿನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಆಯಾ ತಾಲ್ಲೂಕಿನ ಖಾಯಂ ನಿವಾಸಿಗಳ ಮಕ್ಕಳು ಬೇರೆ ತಾಲ್ಲೂಕು/ಜಿಲ್ಲೆ/ರಾಜ್ಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು ಸಹ 6ನೇ ತರಗತಿಗೆ ಮೂಲ ತಾಲ್ಲೂಕಿನಲ್ಲಿ ವ್ಯಾಸಂಗ ಮಾಡಲು ಇಚ್ಚಿಸಿದ್ದಲ್ಲಿ ಮೂಲ ತಾಲ್ಲೂಕಿನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಯಟ್ ಯರಮರಸ್‌ನ ನೋಡಲ್ ಅಧಿಕಾರಿ ಉಪನ್ಯಾಸಕರಾದ ಕನಕಪ್ಪ ಮೊ.ದೂ:9945527472 ಹಾಗೂ ವಿವಿಧೆಡೆಯ ಆದರ್ಶ ವಿದ್ಯಾಲಯಗಳ ಯರಮರಸ್ ಮುಖ್ಯಾಧ್ಯಾಪಕರು ಮೊಬೈಲ್ 9481089777, ಮಾನವಿ ಮುಖ್ಯಾಧ್ಯಾಪಕರು ಮೊ:9945542681, ದೇವದುರ್ಗದ ಮುಖ್ಯಾಧ್ಯಾಪಕರು ಮೊ: 9902905064., ಲಿಂಗಸೂಗೂರು ಮುಖ್ಯಾಧ್ಯಾಪಕರು ಮೊ: 9611365346 ಅಥವಾ ಸಿಂಧನೂರು ಮುಖ್ಯಾಧ್ಯಾಪಕರು ಮೊ: 9902858592 ಸಂಪರ್ಕಿಸಬಹುದು ಎಂದು ಡಯಟ್ ಯರಮರಸ್ ರಾಯಚೂರದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಅಭಿವೃದ್ಧಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ಥಳೀಯ ಪ್ರದೇಶಾಭಿವೃದ್ಧಿಯಡಿ ವಿವಿಧ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಬಸನಗೌಡ ಬಾದರ್ಲಿ



❏ ನೈಜ್ಯ ದೆಸೆ ನ್ಯೂಸ್

ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದಡಿಯಲ್ಲಿ ತಾಲೂಕಿನ ಒಳಬಳ್ಳಾರಿ ಗ್ರಾಮದ ನಡೆದಾಡುವ ದೇವರೆಂದೇ ಪ್ರಸಿದ್ಧರಾದ ಶ್ರೀ. ಮ.ನಿ.ಪ್ರ.ಸ್ವರೂಪಿ ಚನ್ನಬಸವತಾತನವರ **43ನೇ ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಶ್ರೀಮಠದಲ್ಲಿ ಎಂಎಲ್ಸಿ ಬಸನಗೌಡ ಬಾದರ್ಲಿ ತಮ್ಮ ಅನುದಾನದಲ್ಲಿ "ಸಭಾಭವನ" ಕಟ್ಟಡದ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಹರಗುರುಚರ ಮೂರ್ತಿಗಳಿಂದ ನೆರವೇರಿಸಲಾಯಿತು.**

ಸಿಂಧನೂರು ತಾಲೂಕಿನ ರವುಡಕುಂದಾ ಗ್ರಾಮದ ವೇದ ಪಾಠ ಶಾಲಾ, ಸಂಸ್ಥಾನ ಹಿರೇಮಠದ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಪೂಜ್ಯ ಗುರುಗಳೊಂದಿಗೆ ಭೂಮಿ ಪೂಜೆ ನೆರವೇರಿಸಿ, ತಾಲೂಕಿನ ರಮಾಕ್ಯಾಂಪಿನ ಸಾರ್ವಜನಿಕ ಸಮುದಾಯ ಭವನ ಕಟ್ಟಡದ ಕಾಮಗಾರಿಗೆ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಈ ವೇಳೆ: ವೆಂಕಟೇಶ ರಾಗಲಪರ್ವಿ, ಯಂಕನಗೌಡ ಗಿಣಿವಾರ, ಶರಣಯ್ಯಕೋಟೆ, ಹೊನ್ನನ್ನಗೌಡ ಬೆಳಗುರ್ಕಿ, ಪಂಪಾಪತಿ ಅಲಬನೂರು, ಶಿವಬಸನಗೌಡ, ರಂಗನಗೌಡ, ಚಂದ್ರಶೇಖರ್, ಶ್ಯಾಮಿದ್ ಸಾಬ್, ಕನಕಪ್ಪ, ಸದ್ದಾಂ, ಅಮರೇಶ ಗಿರಿಜಾಲಿ, ರಾಮಲಿಂಗಾರೆಡ್ಡಿ ಬೆಳಗುರ್ಕಿ, ಚನ್ನಬಸವ ಪನ್ನೂರು, ಹಾಗೂ ಇತರರು ಉಪಸ್ಥಿತರಿದರು.

## ಸನ್ ರೈಸ್ ಶಿಕ್ಷಣ ಸಂಸ್ಥೆಯಲ್ಲಿ 77 ನೇ ಗಣರಾಜ್ಯೋತ್ಸವದ ಧ್ವಜಾರೋಹಣ ಗೌರವಾಧ್ಯಕ್ಷರಾದ ಶ್ರೀ ಖಾಜಾ ಮೋಹಿನುದ್ದೀನ್ ಅತ್ತಾರ ಅವರಿಂದ ನೆರವೇರಿತು

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಿಂಧನೂರಿನ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ 77ನೇ ಗಣರಾಜ್ಯೋತ್ಸವವನ್ನು ಅತ್ಯಂತ ಸಂಭ್ರಮ, ಗೌರವ ಮತ್ತು ದೇಶಭಕ್ತಿ ಭಾವನೆಯೊಂದಿಗೆ ಆಚರಿಸಲಾಯಿತು. ಈ ಮಹತ್ವದ ದಿನದ ಅಂಗವಾಗಿ ಆಯೋಜಿಸಲಾದ ಧ್ವಜಾರೋಹಣ ಕಾರ್ಯಕ್ರಮವನ್ನು ಸನ್ ರೈಸ್ ಶಿಕ್ಷಣ ಸಂಸ್ಥೆಯ ಗೌರವಾಧ್ಯಕ್ಷರಾದ ಶ್ರೀ ಖಾಜಾ ಮೋಹಿನುದ್ದೀನ್ ಅವರು ನೆರವೇರಿಸಿದರು. ಧ್ವಜಾರೋಹಣದ ಬಳಿಕ ರಾಷ್ಟ್ರಗೀತೆಯನ್ನು ಗೌರವಪೂರ್ವಕವಾಗಿ ಹಾಡಲಾಯಿತು.**

ಈ ಸಂದರ್ಭದಲ್ಲಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ತ್ಯಾಗ, ಬಲಿದಾನ ಮತ್ತು ಸಂವಿಧಾನದ ಮಹತ್ವವನ್ನು ಸ್ಮರಿಸಲಾಯಿತು. ಕಾರ್ಯಕ್ರಮದಲ್ಲಿ ಸನ್ ರೈಸ್ ಶಿಕ್ಷಣ ಸಂಸ್ಥೆಯ



ಕಾರ್ಯದರ್ಶಿಗಳಾದ ಇರ್ಷಾದ್ ಕೆ, ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಸಿರಿಲ್, ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಚಕ್ರವರ್ತಿ, ವಿವಿಧ ವಿಭಾಗಗಳ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಈ ಸಂದರ್ಭ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರು ಗಣರಾಜ್ಯೋತ್ಸವದ ಮಹತ್ವದ ಕುರಿತು ಮಾತನಾಡಿ, "ಭಾರತದ ಸಂವಿಧಾನವು ನಮ್ಮ ದೇಶದ ಶಕ್ತಿ, ಏಕತೆ ಹಾಗೂ ಸಮಾನತೆಯ ಆಧಾರಸ್ತಂಭವಾಗಿದೆ.

ವಿದ್ಯಾರ್ಥಿಗಳು ಸಂವಿಧಾನದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ನಾಗರಿಕರಾಗಬೇಕು" ಎಂದು ಕರೆ ನೀಡಿದರು. ಅದೇ ರೀತಿ ಇಸಾಕ್ ಅವರು ಗಣರಾಜ್ಯೋತ್ಸವದ ಕುರಿತು ಮಾತನಾಡಿ, ದೇಶದ ಏಕತೆ, ಅಖಂಡತೆ ಹಾಗೂ ದೇಶಾಭಿಮಾನವನ್ನು ಯುವಜನತೆ ತಮ್ಮ ಜೀವನದ ಧ್ಯೇಯವನ್ನಾಗಿ ಮಾಡಿಕೊಳ್ಳಬೇಕು ಎಂದು ತಿಳಿಸಿದರು. ಹಾಗೂ ಆಶುಪಾಶ ಅವರು ಗಣರಾಜ್ಯೋತ್ಸವದ ಕುರಿತು ಮಾತನಾಡಿದರು ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ವಿದ್ಯಾರ್ಥಿಗಳು ದೇಶಭಕ್ತಿ ಗೀತೆಗಳನ್ನು ಹಾಡಿ ಸಮಾರಂಭಕ್ಕೆ ಉತ್ಸಾಹ ತುಂಬಿದರು. ತ್ರಿವರ್ಣ ಧ್ವಜದ ಮುಂದೆ ವಿದ್ಯಾರ್ಥಿಗಳಲ್ಲಿ ಕಂಡುಬಂದ ದೇಶಪ್ರೇಮ ಮತ್ತು ಶಿಸ್ತು ಎಲ್ಲರ ಗಮನ ಸೆಳೆಯಿತು.ಒಟ್ಟಾರೆ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮವು ದೇಶಭಕ್ತಿ, ಸಂವಿಧಾನ ಗೌರವ ಮತ್ತು ರಾಷ್ಟ್ರೀಯ ಏಕತೆಯ ಸಂದೇಶವನ್ನು ಸಾರುತ್ತಾ ಅತ್ಯಂತ ಯಶಸ್ವಿಯಾಗಿ ನಡೆಯಿತು.

## ಅಭಿನಂದನ್ ಸ್ಫೂರ್ತಿ ಧಾಮದ ಮಕ್ಕಳ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಉತ್ತಮ ನೃತ್ಯ ಪ್ರದರ್ಶನ

❏ ನೈಜ್ಯ ದೆಸೆ ನ್ಯೂಸ್

**ಮಸ್ಕಿ: 77 ನೇ ಗಣರಾಜ್ಯೋತ್ಸವ ಅಂಗವಾಗಿ ಸರ್ಕಾರಿ ಹಿರಿಯ ಪ್ರಾಥಮಿಕ ಕೇಂದ್ರ ಶಾಲೆಯ ಆವರಣದಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಅಭಿನಂದನ್ ಸ್ಫೂರ್ತಿ ಧಾಮ ಮಸ್ಕಿ ಮಕ್ಕಳು ಉತ್ತಮ ನೃತ್ಯ ಪ್ರದರ್ಶನಕ್ಕಾಗಿ ಗೌರವಾನ್ವಿತ ಶಾಸಕರಾದ ಶ್ರೀ ಬಸವನಗೌಡ ತುರ್ವಿಹಾಳ ಹಾಗೂ ಗೌರವಾನ್ವಿತ ಮಂಜುನಾಥ್ ಭೋಗಾವತಿ ತಹಶೀಲ್ದಾರರು,**



ಗೌರವಾನ್ವಿತ ಅಮರೇಶ್ ಯಾದವ್,ತಾಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ನೌಕರರ ಸಂಘದ ಅಧ್ಯಕ್ಷರು, ಆರಕ್ಷಕ ಇಲಾಖೆಯ ಅಧಿಕಾರಿಗಳು ಹಾಗು ಇನ್ನಿತರ ಅಧಿಕಾರಿಗಳಿಂದ ನೆನಪಿನ ಕಾಣಿಕೆ ಸ್ವೀಕಾರ ಮಾಡಲಾಯಿತು.

## ಕೃಷ್ಣಾ ನದಿ ತೀರದ ಮದರಿ ಗ್ರಾಮದಲ್ಲಿ ಮತ್ತೆ ಚಿರತೆ ಹಾವಳಿ ಗ್ರಾಮಸ್ಥರಲ್ಲಿ ಆತಂಕ

❏ ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ತಾಲೂಕಿನ ಕೃಷ್ಣಾ ನದಿ ತೀರದ ಮದರಿ ಗ್ರಾಮದ ವ್ಯಾಪ್ತಿಯಲ್ಲಿ ಮತ್ತೆ ಚಿರತೆ ಕಾಣಿಸಿಕೊಂಡಿರುವುದು ಗ್ರಾಮಸ್ಥರಲ್ಲಿ ಭೀತಿಯ ವಾತಾವರಣ ಸೃಷ್ಟಿಸಿದೆ. ಮದರಿ ಗ್ರಾಮದ ಸಮೀಪದ ಕಬ್ಬಿನ ಗದ್ದೆಯ ಪಕ್ಕದಲ್ಲೇ ರಸ್ತೆ ಬದಿಯಲ್ಲಿ ಚಿರತೆ ಕಾಣಿಸಿಕೊಂಡಿರುವ ದೃಶ್ಯವು ಕಾರಿನಲ್ಲಿ ಅಳವಡಿಸಿದ್ದ ಡ್ಯಾಶ್ ಕ್ಯಾಮರಾದಲ್ಲಿ ದಾಖಲಾಗಿದ್ದು, ಈ ವಿಡಿಯೋ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.**

ಕಾರಿನಲ್ಲಿ ಸಂಚರಿಸುತ್ತಿದ್ದ ಚಾಲಕರು ತಕ್ಷಣವೇ ಚಿರತೆಯನ್ನು ಗಮನಿಸಿ ವಾಹನದ ವೇಗ ಕಡಿಮೆ ಮಾಡಿಕೊಂಡು, ಎಚ್ಚರಿಕೆಯಿಂದ ದೃಶ್ಯವನ್ನು ಚಿತ್ರೀಕರಿಸಿದ್ದಾರೆ. ನಂತರ ಈ ವಿಷಯವನ್ನು ಸಾರ್ವಜನಿಕರಿಗೂ ಹಾಗೂ ಅರಣ್ಯ ಇಲಾಖೆಯ ಗಮನಕ್ಕೂ ತಂದಿದ್ದಾರೆ. ಡ್ಯಾಶ್ ಕ್ಯಾಮರಾದಲ್ಲಿ



ಸೆರೆಯಾಗಿರುವ ದೃಶ್ಯದಲ್ಲಿ ಚಿರತೆ ರಸ್ತೆ ಬದಿಯ ಕಬ್ಬಿನ ಗದ್ದೆಯಿಂದ ಹೊರಬಂದು ಕೆಲ ಕ್ಷಣ ನಿಂತು, ನಂತರ ಗದ್ದೆಯೊಳಗೆ ಮರೆಯಾಗುತ್ತಿರುವುದು ಸ್ಪಷ್ಟವಾಗಿ ಕಾಣುತ್ತದೆ. ಕೆಲ ತಿಂಗಳ ಹಿಂದೆ ಕೃಷ್ಣಾ ನದಿ ತೀರದ ಕೆಲವು ಪ್ರದೇಶಗಳಲ್ಲಿ ಚಿರತೆ ಸಂಚಾರ ಕಂಡುಬಂದಿದ್ದರೂ, ನಂತರ ಅದರ ಹಾವಳಿ ಕಡಿಮೆಯಾಗಿದೆ ಎನ್ನುವ ಭಾವನೆ ಗ್ರಾಮಸ್ಥರಲ್ಲಿ ಮೂಡಿತ್ತು.

ಆದರೆ ಇದೀಗ ಮತ್ತೆ ರಸ್ತೆ ಪಕ್ಕದಲ್ಲೇ ಚಿರತೆ ಕಾಣಿಸಿಕೊಂಡಿರುವುದು ಆತಂಕವನ್ನು ಇನ್ನಷ್ಟು ಹೆಚ್ಚಿಸಿದೆ ಎಂದು ಮದರಿ ಗ್ರಾಮದ ಶಿವು ಕನ್ನೊಳ್ಳಿ ತಿಳಿಸಿದ್ದಾರೆ. "ಕೆಲ ದಿನಗಳಿಂದ ಚಿರತೆ ಕಾಣಿಸಿಕೊಳ್ಳುವುದಿಲ್ಲ ಎಂದು ಸಮಾಧಾನ ಮಾಡಿಕೊಂಡಿದ್ದೆವು. ಆದರೆ ಈಗ ಮತ್ತೆ ರಸ್ತೆ ಪಕ್ಕದಲ್ಲೇ ಪ್ರತ್ಯಕ್ಷವಾಗಿರುವುದು ಭಯ ಹುಟ್ಟಿಸುತ್ತಿದೆ. ಮಕ್ಕಳು, ರೈತರು ಹಾಗೂ ರಾತ್ರಿ ಸಮಯದಲ್ಲಿ ಸಂಚರಿಸುವವರು ಹೆಚ್ಚು ಅಪಾಯದಲ್ಲಿದ್ದಾರೆ," ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಮದರಿ ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ವ್ಯಾಪಕವಾಗಿ ಕಬ್ಬು ಬೆಳೆ ಇರುವುದರಿಂದ ಚಿರತೆಗಳು ಅಡಗಿಕೊಳ್ಳಲು ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ.

ಜೊತೆಗೆ ಕೃಷ್ಣಾ ನದಿ ತೀರದ ದಟ್ಟವಾದ ಪೊದೆಗಳು ಮತ್ತು ನೀರಿನ ಲಭ್ಯತೆ ಚಿರತೆ ಸಂಚಾರಕ್ಕೆ ಸಹಾಯಕವಾಗುತ್ತಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ಅರಣ್ಯ ಇಲಾಖೆಯು ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಚಿರತೆ ಚಲನವಲನವನ್ನು ನಿಗಾವಹಿಸುವಂತೆ ಆಗ್ರಹಿಸಿದ್ದಾರೆ. ಜೊತೆಗೆ ಕಬ್ಬಿನ ಗದ್ದೆಗಳ ಬಳಿ ಎಚ್ಚರಿಕೆ ಫಲಕಗಳನ್ನು ಅಳವಡಿಸುವುದು, ರಾತ್ರಿ ಸಮಯದಲ್ಲಿ ಪೆಟ್ರೋಲಿಂಗ್ ಹೆಚ್ಚಿಸುವುದು ಹಾಗೂ ಗ್ರಾಮಸ್ಥರಿಗೆ ಜಾಗೃತಿ ಮೂಡಿಸುವ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಇದೀಗ ಮದರಿ ಗ್ರಾಮ ಹಾಗೂ ಸುತ್ತಮುತ್ತಲ ಪ್ರದೇಶದ ಜನರು ರಾತ್ರಿ ಸಮಯದಲ್ಲಿ ಅನಗತ್ಯ ಸಂಚಾರ ತಪ್ಪಿಸುವುದು, ಒಬ್ಬರೇ ಹೊಲಗಳಿಗೆ ಹೋಗದಿರುವುದು ಮತ್ತು ಚಿರತೆ ಕಂಡುಬಂದಲ್ಲಿ ತಕ್ಷಣ ಅರಣ್ಯ ಇಲಾಖೆ ಅಥವಾ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಯುವಕರು ಮನವಿ ಮಾಡುತ್ತಿದ್ದಾರೆ ಚಿರತೆ ಹಾವಳಿ ಮತ್ತೆ ಕಾಣಿಸಿಕೊಂಡಿರುವುದರಿಂದ ಮುದ್ದೇಬಿಹಾಳ ತಾಲೂಕಿನ ಕೃಷ್ಣಾ ನದಿ ತೀರದ ಗ್ರಾಮಗಳಲ್ಲಿ ಆತಂಕದ ಛಾಯೆ ಆವರಿಸಿಕೊಂಡಿದ್ದು, ಅಧಿಕಾರಿಗಳ ತ್ವರಿತ ಕ್ರಮಕ್ಕೆ ಗ್ರಾಮಸ್ಥರು ನಿರೀಕ್ಷೆಯೊಂದಿಗೆ ಕಾಯುತ್ತಿದ್ದಾರೆ.